ಸಂಪುಟ: 4 ಸಂಚಿಕೆ: 102 ಪುಟ: 4 ₹: 4 newsbelagavi@gmail.com 9900332089 9900332089

ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

Read,Share and Follow - www.belagavivaradi.com

Vol-04 Issue: 102 Tuesday, 06, June, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

ಮಹಿಳೆಯರ ಉಚಿತ ಪ್ರಯಾಣಕ್ಕೆ ಮಾರ್ಗಸೂಚಿ ಪ್ರಕಾರ

ಬೆಂಗಳೂರು: ಮಹಿಳೆಯರ ಉಚಿತ ಪ್ರಯಾಣ-ಕ್ಕಾಗಿ ಸರ್ಕಾರ ಜಾರಿಗೆ ತಂದಿರುವ 'ಶಕ್ತಿ' ಯೋಜನೆಗೆ ಸಂಬಂಧಿಸಿದಂತೆ ಸರ್ಕಾರ ಸೋಮವಾರ ಮಾರ್ಗಸೂಚಿ ಪ್ರಕಟಿಸಿದೆ.

ಈ ಸವಲತ್ತು ಪಡೆಯಲು ಸ್ಮಾರ್ಟ್ ಕಾರ್ಡ್ ಕಡ್ಡಾಯ ಎಂದು ಸರ್ಕಾರ ತಿಳಿಸಿದೆ. ಸೇವಾ ಸಿಂಧು ಮೂಲಕ ಅರ್ಜಿ ಪಡೆದು, ಮುಂದಿನ ಮೂರು ತಿಂಗಳ ಒಳಗಾಗಿ ಕಾರ್ಡ್ ವಿತರಣೆ ಕಾರ್ಯ ಪೂರ್ಣಗೊಳಿಸಬೇಕು ಎಂದು ಸರ್ಕಾರವು ಸಾರಿಗೆ ಇಲಾಖೆ ಸೂಚಿಸಿದೆ.

ಸ್ಮಾರ್ಟ್ ಕಾರ್ಡ್ ಸಿಗುವವರೆಗೆ, ಕೇಂದ್ರ, ರಾಜ್ಯ ಸರ್ಕಾರ ಅಥವಾ ಸರ್ಕಾರಿ ಸ್ವಾಮ್ಯದ ಕಚೇರಿಗಳು ವಿತರಿಸಿರುವ ಭಾವಚಿತ್ರ, ವಿಳಾಸವುಳ್ಳ ಗುರುತಿನ ಚೀಟಿಗಳನ್ನು ಶೂನ್ಯ ಟಿಕೆಟ್‌ಗೆ ಪರಿಗಣಿಸಬೇಕು ಎಂದು ಸರ್ಕಾರ ಸೂಚಿಸಿದೆ.

ಯಾವ ಬಸ್‌ಗಳಲ್ಲಿ ಉಚಿತ ಪ್ರಯಾಣ ಇಲ್ಲ?

ರಾಜ್ಯದ ಒಳಗೆ ಸಂಚರಿಸುವ ಐಷಾರಾಮಿ ಬಸ್‌ಗಳಾದ ರಾಜಹಂಸ, ನಾನ್ ಎಸಿ ಸ್ಲೀಪರ್, ವಜ್ರ, ವಾಯುವಜ್ರ, ಐರಾವತ, ಐರಾವತ ಕ್ಲಬ್ ಕ್ಲಾಸ್, ಐರಾವತ ಗೋಲ್ಡ್ ಕ್ಲಾಸ್, ಅಂಬಾರಿ, ಅಂಬಾರಿ ಡ್ರೀಮ್ ಕ್ಲಾಸ್, ಅಂಬಾರಿ ಉತ್ಸವ್, ಫ್ಲೈ ಬಸ್, ಇ.ವಿ ಪವರ್ ಪ್ಲಸ್ ಇವುಗಳಲ್ಲಿ ಉಚಿತ ಪ್ರಯಾಣ ಇಲ್ಲ

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ಸುಗಳನ್ನು ಹೊರತುಪಡಿಸಿ ಉಳಿದ ರಸ್ತೆ ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ವಾಯವ್ಯ ಕರ್ನಾಟಕ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ ಎಲ್ಲಾ ಬಸ್ಸುಗಳಲ್ಲಿ (ಅಂತರರಾಜ್ಯ ಎ.ಸಿ. ಮತ್ತು ಐಷಾರಾಮಿ ಬಸ್ಸುಗಳನ್ನು ಹೊರತುಪಡಿಸಿ) ಶೇ 50ರಷ್ಟು ಆಸನಗಳನ್ನು ಪುರುಷರಿಗೆ ಕಾಯ್ದಿರಿಸಬೇಕು ಎಂದು ಆದೇಶದಲ್ಲಿ ಹೇಳಲಾಗಿದೆ.

ಜುಲೈ 7ರಂದು ಬಜೆಟ್ ಮಂಡನೆ: ಸಿದ್ದರಾಮಯ್ಯ

ದಾವಣಗೆರೆ: ಜುಲೈ 3ರಿಂದ ಬಜೆಟ್ ಅಧಿವೇಶನ ಆರಂಭವಾಗಲಿದ್ದು, ಜುಲೈ 7ರಂದು ಬಜೆಟ್ ಮಂಡಿಸಲಾಗುವುದು ಎಂದು ಹಣಕಾಸು ಸಚಿವರೂ ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಗೂ ಮುನ್ನ ಸುದ್ದಿಗಾರರ ಜೊತೆ ಅವರು ಮಾತನಾಡಿದರು.

ಬಜೆಟ್ ತಯಾರಿಕಾ ಪೂರ್ವಭಾವಿ ಸಭೆಯನ್ನೇ ಇನ್ನೂ ನಡೆಸಿಲ್ಲ. ಜುಲೈ 3ರಂದು ರಾಜ್ಯಪಾಲರು ಜಂಟಿ ಅಧಿವೇಶನವನ್ನು ಉದ್ದೇಶಿಸಿ ಭಾಷಣ ಮಾಡುವರು. ಆ ಬಳಿಕ ರಾಜ್ಯಪಾಲರ ಭಾಷಣದ ಬಗ್ಗೆ ಚರ್ಚೆ ನಡೆದ ನಂತರ 7ರಂದು ಬಜೆಟ್ ಮಂಡಿಸಲಾಗುವುದು. ಬಜೆಟ್ ಗಾತ್ರದ ಬಗ್ಗೆ ಈಗಲೇ ಹೇಳಲು ಸಾಧ್ಯವಿಲ್ಲ ಎಂದರು.

ವಿದ್ಯುತ್ ದರ ಹೆಚ್ಚಳ ನಾವು ಮಾಡಿಲ್ಲ. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕರ್ನಾಟಕ ವಿದ್ಯುತ್ ನಿಯಂತ್ರಣ ಮಂಡಳಿ ಪ್ರಸ್ತಾವ ಸಲ್ಲಿಸಿತ್ತು. ಈಗ ನಾವು ಅದನ್ನು ಜಾರಿಗೊಳಿಸಿದ್ದೇವೆ ಅಷ್ಟೇ

ಎಂದು ವಿದ್ಯುತ್ ದರ ಹೆಚ್ಚಳ ಮಾಡಿದ ವಿಚಾರದ ಬಗ್ಗೆ ಸಮರ್ಥಿಸಿಕೊಂಡರು.

ಗೋಹತ್ಯೆ ನಿಷೇಧ ಕಾಯ್ದೆ ವಾಪಸ್ ಪಡೆಯುವ ವಿಷಯಕ್ಕೆ ಸಂಬಂಧಿಸಿದಂತೆ ಉತ್ತರಿಸಿದ ಸಿದ್ದರಾಮಯ್ಯ, 1964 ರಲ್ಲಿಯೇ ಗೋಹತ್ಯೆ ನಿಷೇಧ ಕಾಯ್ದೆ ಜಾರಿಗೆ ಬಂದಿದೆ. ಆ ಪ್ರಕಾರ 12 ವರ್ಷ ತುಂಬಿದ ರಾಸುಗಳು ಮತ್ತು ವ್ಯವಸಾಯಕ್ಕೆ ಅನುಕೂಲಕ್ಕೆ ಬಾರದ ರಾಸು ಮುಕ್ತಗೊಳಿಸಲಾಗಿತ್ತು. ಬಿಜೆಪಿ ಸರ್ಕಾರ ಕಾಯ್ದೆ ತಿದ್ದುಪಡಿ ಮಾಡಿ ಜಾರಿಗೆ ತಂದಿತ್ತು. ಈಗ ಕ್ಯಾಬಿನೆಟ್ ನಲ್ಲಿ ನಾವು ಚರ್ಚೆ ನಡೆಸಿ ಮುಂದಿನ ತೀರ್ಮಾನ ತೆಗೆದುಕೊಳ್ಳುತ್ತೇವೆ ಎಂದರು.

ಕೃಷಿ ಚಟುವಟಿಕೆಗೆ ಅಗತ್ಯವಾದ ಬಿತ್ತನೆ ಬೀಜ, ರಸಗೊಬ್ಬರ, ಕೀಟ ನಾಶಕಗಳನ್ನು ಪೂರೈಸುವಂತೆ ವೀಡಿಯೋ ಕಾನ್ಫರೆನ್ಸ್ ಮೂಲಕ ಎಲ್ಲಾ ಜಿಲ್ಲಾಧಿಕಾ-ರಿಗಳಿಗೆ ಮತ್ತು ಜಿಪಂ ಸಿಇಒಗಳಿಗೆ ಸೂಚಿಸಿದ್ದೇನೆ ಎಂದು ತಿಳಿಸಿದರು.

ಪ್ರವಾಹ ಬರದಿರಲಿ ಹಾರೈಸುತ್ತೇವೆ. ಆದರೆ, ಹಾಗೊಂದು ವೇಳೆ ಪ್ರವಾಹ ಬಂದರೆ ಎದುರಿಸಲು ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳುವಂತೆ ಆಯಾ ಜಿಲ್ಲೆಯ ಅಧಿಕಾರಿಗಳಿಗೆ ತಿಳಿಸಿದ್ದೇನೆ ಎಂದರು.

ಈ ವೇಳೆ ಸಚಿವ ಎಸ್ ಎಸ್ ಮಲ್ಲಿಕಾರ್ಜುನ್, ಐಜಿಪಿ ಟಿ.ತ್ಯಾಗರಾಜ್, ಜಿಲ್ಲಾಧಿಕಾರಿ ಶಿವಾನಂದ ಕಾಪಶಿ,ಜಿಲ್ಲಾ ರಕ್ಷಣಾಧಿಕಾರಿ ಕೆ.ಅರುಣ್,ಜಿ.ಪಂ ಸಿಇಒ ಸುರೇಶ್ ಇಟ್ನಾಳ್,ಜಿಲ್ಲೆಯ ಶಾಸಕರುಗಳಾದ ಕೆ.ಎಸ್ ಬಸವಂತಪ್ಪ,ಶಿವಗಂಗಾ ಬಸವರಾಜ್,ಬಿ. ದೇವೇಂದ್ರಪ್ಪ, ಡಿ.ಜಿ ಶಾಂತನಗೌಡ,ಸೈಯದ್ ಸೈಫುಲ್ಲಾ ಇತರರಿದ್ದರು.

ಬಿಜೆಪಿ ವಿರುದ್ಧ ಸಿಎಂ ಸಿದ್ದರಾಮಯ್ಯ ಕಿಡಿ

ಬೆಂಗಳೂರು: ವಿದ್ಯುತ್ ಅನ್ನು ದುಂದುವೆಚ್ಚ ಮತ್ತು ದುರುಪಯೋಗ ಮಾಡುವಂತೆ ಜನರಿಗೆ ಬಿಜೆಪಿ ಕುಮ್ಮಕ್ಕು ಕೊಡುತ್ತಿದೆ. ಆದರೆ ನಾವು ಅಗತ್ಯಕ್ಕೆ ತಕ್ಕಂತೆ ಬಳಸಲು ನಾಡಿನ ಜನತೆಗೆ ನೆರವಾಗುತ್ತೇವೆ. ಈ ಮೂಲಕ ದುಂದುವೆಚ್ಚ-ದುರುಪಯೋಗಕ್ಕೆ ಕಡಿವಾಣ ಹಾಕುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಜ್ಞಾನಜ್ಯೋತಿ ಸಭಾಂಗಣದಲ್ಲಿ ಅರಣ್ಯ ಇಲಾಖೆ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ 2023 ಉದ್ಘಾಟಿಸಿದ ಬಳಿಕ ಕರ್ನಾಟಕ ರಾಜ್ಯ ಪರಿಸರ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

ನೀರು, ಗಾಳಿ, ವಿದ್ಯುತ್ ಯಾವುದನ್ನೂ ದುಂದುವೆಚ್ಚ ಮಾಡಬಾರದು. ದುಂದುವೆಚ್ಚ ಎನ್ನುವುದು ಪ್ರಕೃತಿ ವಿರೋಧಿ, ಜನ ವಿರೋಧಿ ಮತ್ತು ಪರಿಸರ ವಿರೋಧಿಯಾದದ್ದು ಎಂದರು.

ಮನುಷ್ಯ ಪ್ರಕೃತಿಕ ಅವಿಭಾಜ್ಯ ಅಂಗ. ಪ್ರಕೃತಿ ನಾಶ ನಮ್ಮ ನಾಶ. ಹೀಗಾಗಿ ಪ್ರಕೃತಿಯ ಜತೆಗೆ ನಾವು ಬೆಳೆಯಬೇಕು ಮತ್ತು ಬದುಕಬೇಕು ಎಂದು ಅವರು ಕರೆ ನೀಡಿದರು.

ಸಂಕಷ್ಟದಲ್ಲಿರುವ ನಾಡಿನ ಬಡವರು ಮತ್ತು ಮಧ್ಯಮ ವರ್ಗದವರ ನೆರವಿಗಾಗಿ ನಾವು ಉಚಿತ ವಿದ್ಯುತ್ ನೀಡಲು ಮುಂದಾಗಿದ್ದೇವೆ. ಒಂದು ವರ್ಷದ ಸರಾಸರಿ ಬಳಕೆಗಿಂತ ಶೇ.10 ರಷ್ಟು ಹೆಚ್ಚು ಉಚಿತ ವಿದ್ಯುತ್ ಬಳಕೆಗೆ ನಾವು ಅವಕಾಶ ನೀಡಿದ್ದೇವೆ. ಇದನ್ನು ನಾಡಿನ ಜನತೆ ಸಂಭ್ರಮದಿಂದ ಒಪ್ಪಿಕೊಂಡಿದ್ದಾರೆ ಎಂದು ಹೇಳಿದರು.

ಆದರೆ ಜನರಿಂದ ತಿರಸ್ಕೃತಗೊಂಡಿರುವ ಬಿಜೆಪಿ, ವಿದ್ಯುತ್ ಅನ್ನು ಅನಗತ್ಯ ದುರ್ಬಳಕೆ, ದುಂದುವೆಚ್ಚ ಮತ್ತು ದುರುಪಯೋಗ ಮಾಡಲು ಕುಮ್ಮಕ್ಕು ಕೊಡುತ್ತಿದೆ. ಇದು ಜನವಿರೋಧಿಯಾದ ನಡಿಗೆ. ನಾಡಿನ ಪ್ರಜ್ಞಾವಂತ ಜನತೆ ಇದಕ್ಕೆ ಸೊಪ್ಪು ಹಾಕುವುದಿಲ್ಲ ಎನ್ನುವ ಭರವಸೆ ನಮಗಿದೆ ಎಂದರು.

ಪರಿಸರ ಉಳಿಸುವುದು, ಕಾಡು ಬೆಳೆಸುವುದು ಮತ್ತು ಉಳಿಸುವುದು ಕೇವಲ ಅರಣ್ಯ ಇಲಾಖೆ ಕರ್ತವ್ಯ ಅಲ್ಲ. ಪ್ರತಿಯೊಬ್ಬರ ಜವಾಬ್ದಾರಿ. ಪ್ರಕೃತಿಯ ಪ್ರಯೋಜನವನ್ನು ಪಡೆಯುತ್ತಿರುವ ಪ್ರತಿಯೊಬ್ಬರ ಮೇಲೂ ಪ್ರಕೃತಿ ಉಳಿಸುವ ಜವಾಬ್ದಾರಿ ಇದೆ ಎಂದರು.

ಸಾಮರ್ಥ್ಯವುಳ್ಳವರು ಗ್ಯಾರಂಟಿಗಳನ್ನು ತ್ಯಜಿಸಿ, ಇಲ್ಲದವರಿಗೆ ಸಹಾಯ ಮಾಡಿ: ಸಿಎಂ ಮನವಿ

ಬೆಂಗಳೂರು: ಕಾಂಗ್ರೆಸ್ ಸರ್ಕಾರ ಘೋಷಿಸಿರುವ ಗ್ಯಾರಂಟಿ ಗಳನ್ನು ಆರ್ಥಿಕ ವಾಗಿ ಸಾಮರ್ಥ್ಯವುಳ್ಳವರು ತ್ಯಜಿಸಿ, ಇಲ್ಲದವ-ರಿಗೆ ತಲುಪುವಂತೆ ಮಾಡಿ ಎಂದು ಸಿಎಂ ಸಿದ್ದರಾಮಯ್ಯ ರಾಜ್ಯದ ಜನತೆಗೆ ಮನವಿ ಮಾಡಿದ್ದಾರೆ.

'ಉಳ್ಳವರು' ದೊಡ್ಡ ಮನಸ್ಸಿನಿಂದ 'ಇಲ್ಲದವರ'ನ್ನು ಗಮನದಲ್ಲಿಟ್ಟುಕೊಂಡು ಕಾಂಗ್ರೆಸ್ ಸರ್ಕಾರ ಘೋಷಿಸಿರುವ ಗ್ಯಾರಂಟಿ ಯೋಜನೆಗಳನ್ನು ಬಿಟ್ಟುಕೊಟ್ಟರೆ ಅದು ರಾಜ್ಯ ಸರ್ಕಾರದ ಮೇಲಿರುವ ಆರ್ಥಿಕ ಹೊರೆಯನ್ನು ಕಡಿತಗೊಳಿಸುತ್ತದೆ.

ಇದರಿಂದ ಆ ಹಣವನ್ನು ಅಭಿವೃದ್ಧಿ ಕಾಮಗಾ-ರಿಗಳಿಗೆ ಹಣ ಉಪಯೋಗಿಸಬಹುದು ಎಂದು ಸಿಎಂ ಪತ್ರದಲ್ಲಿ ಉಲ್ಲೇಖಿಸಿ ಹೇಳಿದ್ದಾರೆ.

ಸರ್ಕಾರಿ ಅಧಿಕಾರಿಗಳು, ಖಾಸಗಿ ವಲಯದಲ್ಲಿ ಕೆಲಸ ಮಾಡುತ್ತಿರುವವರು ಮತ್ತು ಮಾಧ್ಯಮಗಳ ಮುಖ್ಯಸ್ಥರು ಗೃಹ ಜ್ಯೋತಿ ಯೋಜನೆಯನ್ನು ಬಿಟ್ಟುಕೊಡುವುದಾಗಿ ನನಗೆ ಪತ್ರ ಬರೆದಿದ್ದಾರೆ.

ಈ ಯೋಜನೆಯ ಲಾಭದಿಂದ ಹೊರಗುಳಿಯಲು ಬಯಸುವವರಿಗೆ ಅವಕಾಶ ಮಾಡಿಕೊಡಲಾಗುವುದು ಎಂದು ಹೇಳಿದ್ದಾರೆ.

ಶೀಘ್ರವೇ 15,000 ಪೊಲೀಸ್ ಕಾನ್ಸ್ ಟೇಬಲ್ ಹುದ್ದೆಗೆ ನೇಮಕಾತಿ: ಜಿ ಪರಮೇಶ್ವರ್

ತುಮಕೂರು: ಶೀಘ್ರವೇ 15,000 ಪೊಲೀಸ್ ಕಾನ್ಸ್ಟೇಬಲ್ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು ಎಂದು ಗೃಹ ಸಚಿವ ಜಿ ಪರಮೇಶ್ವರ್ ಹೇಳಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಅವರು ಶೀಘ್ರವೇ 15, 000 ಪೊಲೀಸ್ ಪೇದೆಗಳ ನೇಮಕಾತಿ ಮಾಡಲಾಗುತ್ತದೆ.

ಪಿಎಸ್ ಐ ನೇಮಕಾತಿ ಹಗರಣದ ತನಿಖೆ ನಡೆಯುತ್ತಿದೆ. ಮರು ಪರೀಕ್ಷೆಗೆ ಕೋರ್ಟ್ ಅನುಮತಿ ಕೂಡ ನೀಡಿದೆ, ಈ ಬಗ್ಗೆ ಕಾನೂನು ತಜ್ಞರ ಜೊತೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು. ಔರಾದ್ಕರ್ ವರದಿ ಜಾರಿ ಬಗ್ಗೆ ಪರಿಶೀಲನೆ ನಡೆಸಲಾಗುವುದು, 7 ನೇ ವೇತನ ಆಯೋಗ ಜಾರಿಗೆ ಮಾಡಿದಲ್ಲಿ ಪ್ರತ್ಯೇಕವಾಗಿ ಔರಾದ್ಕರ್ ವರದಿ ಜಾರಿ ಮಾಡುವ ಅಗತ್ಯ ಇಲ್ಲ ಎಂದರು.

ಕುಸಿದ ಬಿದ್ದ 1,700 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿದ್ದ ಸೇತುವೆ

ಪಾಟ್ನಾ: ಬರೋಬ್ಬರಿ 1,700 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿದ್ದ ಸೇತುವೆಯೊಂದು ಕುಸಿದು ಬಿದ್ದಿರುವ ಘಟನೆ ಬಿಹಾರದಲ್ಲಿ ನಡೆದಿದೆ.

ಬಿಹಾರದ ಖಗರಿಯಾದಲ್ಲಿ ನಿರ್ಮಿಸಲಾಗುತ್ತಿದ್ದ ಅಗುವನಿ ಸುಲ್ತಾನ್‌ಗಂಜ್ ಗಂಗಾ ಸೇತುವೆ ಭಾನುವಾರ ಕುಸಿದು ನೀರುಪಾಲಾಗಿದೆ. ಘಟನೆಯಲ್ಲಿ ಸದ್ಯ ಯಾವುದೇ ಪ್ರಾಣಹಾನಿಯಾಗಿಲ್ಲ. ಸ್ಥಳೀಯರು ಸೇತುವೆ ಕುಸಿದು ಬೀಳುತ್ತಿರುವ ವೀಡಿಯೋಗಳನ್ನು ಸೆರೆಹಿಡಿದ್ದು, ಇವು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ.

ಸೇತುವೆಯನ್ನು ಖಗಾರಿಯಾ, ಆಗುವನಿ ಮತ್ತು ಸುಲ್ತಾನ್‌ಗಂಜ್ ನಡುವೆ ಗಂಗಾ ನದಿಯ ಮೇಲೆ ನಿರ್ಮಿಸಲಾಗುತ್ತಿತ್ತು. ಏಪ್ರಿಲ್‌ನಲ್ಲಿ ಸುರಿದಿದ್ದ ಬಿರುಗಾಳಿ ಸಹಿತ ಭಾರೀ ಮಳೆಯ ಪರಿಣಾಮ ಸೇತುವೆಗೆ ಹಾನಿಯಾಗಿತ್ತು. 2 ವರ್ಷಗಳ ಹಿಂದೆಯೂ ಸೇತುವೆಯ ಒಂದು ಭಾಗ ಕುಸಿದಿತ್ತು ಎಂದು ವರದಿಗಳು ತಿಳಿಸಿವೆ.

ಏಪ್ರಿಲ್‌ನಲ್ಲಿ ಸೇತುವೆಗೆ ಹಾನಿಯಾಗಿದ್ದಾಗ ಕಳಪೆ ಕಾಮಗಾರಿಯ ಆರೋಪಗಳು ಕೇಳಿಬಂದಿದ್ದವು. ಆದರೂ ಸೇತುವೆ ನಿರ್ಮಾಣ-ಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಎಚ್ಚೆತ್ತುಕೊಂಡಿರಲಿಲ್ಲ. ಹೀಗಾಗಿ ನಿರ್ಮಾಣಹಂತದಲ್ಲಿದ್ದಾಗಲೇ ಸೇತುವೆ ಕುಸಿದಿದೆ.

ಈ ಹಿನ್ನೆಲೆ ನಿತೀಶ್ ಕುಮಾರ್ ನೇತೃತ್ವದ ಬಿಹಾರದ ಸರ್ಕಾರವನ್ನು ಸ್ಥಳೀಯರು ತರಾಟೆಗೆ ತೆಗೆದುಕೊಂಡಿದ್ದಾರೆ.

ಇದಕ್ಕೂ ಮೊದಲು 2022 ರ ಡಿಸೆಂಬರ್‌ನಲ್ಲಿ ಬಿಹಾರದ ಬೇಗುಸರಾಯ್‌ನಲ್ಲಿ ಬುರ್ಹಿ ಗಂಡಕ್ ನದಿಗೆ ಅಡ್ಡಲಾಗಿ ನಿರ್ಮಿಸಲಾಗಿದ್ದ ಸೇತುವೆಯ ಒಂದು ಭಾಗ ಕುಸಿದಿತ್ತು. ಸೇತುವೆ ಬಿರುಕು ಬಿಟ್ಟಿದ್ದು, ಅದರ 2-3 ಕಂಬಗಳು ಬಿದ್ದಿವೆ ಎಂದು ವರದಿಯಾಗಿತ್ತು. ಅದಕ್ಕೂ ಒಂದು ತಿಂಗಳ ಹಿಂದೆ ನವೆಂಬರ್‌ನಲ್ಲಿ ಸಿಎಂ ನಿತೀಶ್ ಕುಮಾರ್ ಅವರ ನಳಂದ ಜಿಲ್ಲೆಯಲ್ಲಿ ನಿರ್ಮಾಣ ಹಂತದ ಸೇತುವೆ ಕುಸಿದು ಬಿದ್ದಿತ್ತು. ಪರಿಣಾಮ ಕಾರ್ಮಿಕರೊಬ್ಬರು ಸಾವನ್ನಪ್ಪಿದ್ದು, ಇನ್ನೊಬ್ಬರು ಗಾಯಗೊಂಡಿದ್ದರು. ಕಿಶನ್‌ಗಂಜ್ ಮತ್ತು ಸಹರ್ಸಾ ಜಿಲ್ಲೆಗಳಲ್ಲಿಯೂ ಉದ್ಘಾಟನೆಗೆ ಮುನ್ನ ನಿರ್ಮಾಣ ಹಂತದಲ್ಲಿದ್ದ ಸೇತುವೆಗಳು ಕುಸಿದಿವೆ.

ಇಂಟರ್‌ಲಾಕ್ ಸಿಸ್ಟಮ್ ಸಮಸ್ಯೆಯಿಂದ ರೈಲು ಅಪಘಾತ ಸಂಭವಿಸಿದೆ: ರೈಲ್ವೇ ಸಚಿವ ಅಶ್ವಿನಿ ವೈಷ್ಣವ್

ನವದೆಹಲಿ: ಒಡಿಶಾ ರೈಲು ದುರಂತದ ಪ್ರಾಥ-ಮಿಕ ತನಿಖೆಯನ್ನು ಅಧಿಕಾ-ರಿಗಳು ಪೂರೈಸಿದ್ದು, ವರದಿ ನೀಡಿದ್ದಾರೆ. ಇಂಟರ್‌ಲಾಕ್ ಸಿಸ್ಟಮ್ ಸಮಸ್ಯೆಯಿಂದಾಗಿ ಒಡಿಶಾ ರೈಲು ಅಪಘಾತ ಸಂಭವಿಸಿದೆ ಎಂದು ಅಧಿಕಾರಿಗಳು ವರದಿಯಲ್ಲಿ ಉಲ್ಲೇಖಿಸಿದ್ದಾರೆ ಎಂದು ಕೇಂದ್ರ ರೈಲ್ವೇ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ಈ ಬಗ್ಗೆ ಕಿರಿಯ ಅಧಿಕಾರಿಗಳು ಫೆಬ್ರವರಿ 9 ರಂದು ಮೇಲಾಧಿಕಾ-ರಿಗಳ ಗಮನಕ್ಕೆ ತಂದಿದ್ದರು. ಆದರೆ ಅಧಿಕಾರಿಗಳು ಈ ಬಗ್ಗೆ ಗಮನಹ-ರಿಸಿರಲಿಲ್ಲ. ಇದರಿಂದಾಗಿ ತೊಂದರೆ ಸಂಭವಿಸಿರುವ ಸಾಧ್ಯತೆಗಳ ಬಗ್ಗೆ ಪ್ರಾಥಮಿಕ ವರದಿಯಲ್ಲಿ ಉಲ್ಲೇಖಿಸಲಾಗಿದೆ ಎಂದು ಅವರು ಹೇಳಿದ್ದಾರೆ.

ಅಪಘಾತ ಸ್ಥಳದಿಂದ ಎಲ್ಲಾ ಮೃತದೇಹಗಳನ್ನು ತೆಗೆದುಹಾಕಲಾಗಿದೆ. ಬುಧವಾರ ಬೆಳಿಗ್ಗೆಯಿಂದ ರೈಲು ಸಂಚಾರ ಆರಂಭಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ. ಕೋರಮಂಡಲ್ ಎಕ್ಸ್ಪ್ರೆಸ್, ಬೆಂಗಳೂರು-ಹೌರಾ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ಮತ್ತು ಗೂಡ್ಸ್ ರೈಲು ನಡುವಿನ ಭೀಕರ ಅಪಘಾತದಲ್ಲಿ ಕನಿಷ್ಠ 288 ಜನರು ಸಾವನ್ನಪ್ಪಿದ್ದರು. ದೇಶದ ಅತ್ಯಂತ ಭೀಕರ ರೈಲು ದುರಂತಗಳಲ್ಲಿ ಇದು ಒಂದಾಗಿದೆ. ಅಪಘಾತದಲ್ಲಿ 900 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಅವರಲ್ಲಿ ಹೆಚ್ಚಿನವರನ್ನು ಬಾಲಸೋರ್ನ ವಿವಿಧ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ.

ಏನಿದು ಇಂಟರ್‌ಲಾಕ್ ಸಿಸ್ಟಮ್? ರೈಲು ಯಾವ ನಿಲ್ದಾಣಕ್ಕೆ ಯಾವ ಟ್ರ್ಯಾಕ್ ಮೂಲಕ ಹೋಗಬೇಕೆಂದು ಇಂಟರ್‌ಲಾಕ್ ಸಿಸ್ಟಮ್ ಮೂಲಕ ನಿರ್ಧಾರ ಮಾಡಲಾಗುತ್ತದೆ. ಮಾರ್ಗ ಬದಲಾವಣೆಯನ್ನು ಸಹ ಇಂಟರ್‌ಲಾಕ್ ಸಿಸ್ಟಮ್ ಮೂಲಕವೇ ಮಾಡಲಾಗುತ್ತದೆ. ಹಳಿಯಿಂದ ಹಳಿಗೆ ರೈಲು ಸಂಚಾರ ಮಾರ್ಗವನ್ನು ಬದಲಾಯಿಸಲು ಇಂಟ-ರ್‌ಲಾಕ್ ಸಿಸ್ಟಮ್ ಕೆಲಸ ನಿರ್ವಹಿಸುತ್ತದೆ.

ಒಡಿಶಾ ರೈಲು ದುರಂತ: ಅನಾಥರಾದ ಮಕ್ಕಳ ವಿದ್ಯಾಭ್ಯಾಸ ಜವಾಬ್ದಾರಿ ಹೊಣೆ ಹೊತ್ತ ಅದಾನಿ

ಭಾರತದ ರೈಲು ಇತಿಹಾಸದಲ್ಲಿ ನಡೆದ ಅತಿ ದೊಡ್ಡ ದುರಂತಗಳ ಪೈಕಿ ಒಡಿಶಾ ರೈಲು ಅಪಘಾತ ಕೂಡ ಒಂದು. ಬರೋಬ್ಬರಿ 288 ಮಂದಿ ಪ್ರಾಣ ಕಳೆದುಕೊಂಡು, 800ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ.

ಇನ್ನೂ ಈ ದುರಂತದಲ್ಲಿ ಹಲವರ ಸ್ಥಿತಿ ಗಂಭೀರವಾಗಿದೆ. ಗಾಯಾಳು ಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಕುಟುಂಬಸ್ಥರನ್ನು ಕಳೆದುಕೊಂಡ ಜನರ ಕಣ್ಣೀರು, ಆಕ್ರಂದನಕ್ಕೆ



ಕೊನೆ ಇಲ್ಲದಂತಾಗಿದೆ.

ಇನ್ನು ಈ ನಡುವೆ ಉದ್ಯಮಿ ಗೌತಮ್ ಅದಾನಿ ಮಹತ್ವದ ಘೋಷಣೆ ಮಾಡಿದ್ದಾರೆ.

ಒಡಿಶಾ ರೈಲು ದುರಂತದಿಂದ ಅನಾಥರಾದ ಮಕ್ಕಳ ಸಂಪೂರ್ಣ ಶಿಕ್ಷಣದ ಜವಾಬ್ದಾರಿಯನ್ನು ಅದಾನಿ ಗ್ರೂಪ್ ವಹಿಸಲಿದೆ ಎಂದು ಅವರು ಟ್ವೀಟ್ ಮಾಡಿದ್ದಾರೆ.

ಒಡಿಶಾ ರೈಲು ಅಪಘಾತ ತೀವ್ರವಾಗಿ ನೋವು ತಂದಿದೆ.

ಮನಸ್ಸಿ

"ಪ್ಲಾಸ್ಟಿಕ್ ಮಾಲಿನ್ಯ ಮೆಟ್ಟಿ ನಿಲ್ಲೋಣ" ಎಂಬ ಧ್ಯೇಯ ವಾಕ್ಯದೊಂದಿಗೆ ವಿಶ್ವ ಪರಿಸರ ದಿನ-2023 ಆಚರಣೆ

ಎಚ್.ಮಾರುತಿ

ಭೂಮಿಯು ಪ್ರತಿಯೊಬ್ಬ ಮನುಷ್ಯನ ಅಗತ್ಯಗಳನ್ನು ಪೂರೈಸಲು ಸಾಕಷ್ಟು ಒದಗಿಸುತ್ತದೆ. ಆದರೆ ಪ್ರತಿಯೊಬ್ಬ ಮನುಷ್ಯನ *ದುರಾಸೆಯನ್ನಲ್ಲ ಮಹಾತ್ಮಾ ಗಾಂಧಿ ಭೂಮಿ ಮತ್ತು ಪರಿಸರವನ್ನು ಸಂರಕ್ಷಿಸಲು ಮತ್ತು ಜಾಗೃತಿ ಮೂಡಿಸಲು ಪ್ರತಿ ವರ್ಷ ಜೂನ್ 5 ಅನ್ನು ವಿಶ್ವ ಪರಿಸರ ದಿನ ಎಂದು ವಿಶ್ವದಾದ್ಯಂತ ಆಚರಿಸಲಾಗಿದೆ. 2023 ರಲ್ಲಿ 51 ನೇ ವರ್ಷದ ವಿಶ್ವ ಪರಿಸರ ದಿನಾಚರಣೆ ನಡೆಯುತ್ತಿದೆ.

ಈ ವರ್ಷದ ಆಚರಣೆಯನ್ನು " ಪ್ಲಾಸ್ಟಿಕ್ ಮಾಲಿನ್ಯ ಮೆಟ್ಟಿ ನಿಲ್ಲೋಣ " ಎಂಬ ಥೀಮ್ ದೊಂದಿಗೆ ಆಚರಣೆ ಮಾಡಲಾಗುತ್ತದೆ. ಪರಿಸರ ಕುರಿತು ಜಾಗೃತಿ ಮತ್ತು ಅರಿವು ಮೂಡಿಸಲು ಪ್ರತಿ ವರ್ಷ ವಿಶ್ವ ಪರಿಸರ ದಿನವನ್ನು ಆಯೋಜಿಸಲಾಗುತ್ತದೆ.

ಪರಿಸರ ಸಂರಕ್ಷಣೆ ಕುರಿತು ಕಾಳಜಿ ಮೂಡಿಸಲು ಪ್ರತಿ ವರ್ಷ ಒಂದೊಂದು ಧ್ಯೇಯ ವಾಕ್ಯದ ಘೋಷಣೆ ನೀಡಲಾಗುತ್ತದೆ.

ವಿಶ್ವ ಪರಿಸರ ದಿನ ಕುರಿತ ಮಹತ್ವದ ಸಂಗತಿಗಳು

1. ಜೂನ್ 5, 1973 ರಂದು, ಮೊದಲ ವಿಶ್ವ ಪರಿಸರ ದಿನ ಆಚರಣೆಗೆ ನಾಂದಿ ಮತ್ತು ಮೊದಲ ವಿಶ್ವ ಪರಿಸರ ದಿನ ಆಚರಣೆ.
2. ವಿಶ್ವ ಪರಿಸರ ದಿನಕ್ಕೆಂದೇ ಪ್ರತ್ಯೇಕ ಗೀತೆಯನ್ನು 2013 ರಲ್ಲಿ ನವದೆಹಲಿಯಲ್ಲಿ ರಚಿಸಲಾಗಿದೆ
3. 100 ಕ್ಕೂ ಹೆಚ್ಚು ದೇಶಗಳು ಸಾರ್ವಜನಿಕ ರಜಾ ರಜೆ ಘೋಷಣೆ ಮಾಡಿವೆ
4. ಆಹಾರ ವ್ಯರ್ಥವನ್ನು ಕಡಿಮೆ ಮಾಡುವುದರಿಂದ ಜಾಗತಿಕ ಇಂಗಾಲದ ಹೊರ ಸೂಸುವಿಕೆಯನ್ನು 14% ರಷ್ಟು ನಿಯಂತ್ರಿಸಲು ಸಹಾಯ ಮಾಡುತ್ತದೆ
5. ವಿಶ್ವಸಂಸ್ಥೆಯ ಪರಿಸರ ಕಾರ್ಯಕ್ರಮವನ್ನು ರಚಿಸುವ ನಿರ್ಣಯವನ್ನು ಜೂನ್ 5, 1972 ರಂದು ಅಂಗೀಕರಿಸಲಾಗಿದೆ.
6. ವಿಶ್ವಸಂಸ್ಥೆ ವರದಿಯ ಪ್ರಕಾರ, ಪ್ರಸ್ತುತ ಜನಸಂಖ್ಯೆಯ ಬೆಳವಣಿಗೆ ಮತ್ತು ಬಳಕೆಯ ದರದೊಂದಿಗೆ, 2050 ರ ವೇಳೆಗೆ ಮೂರು ಗ್ರಹಗಳ ಅವಶ್ಯಕತೆ ಕಂಡು ಬರುತ್ತದೆ

ವಿಶ್ವ ಪರಿಸರ ದಿನದ ಇತಿಹಾಸ ಮತ್ತು ಮಹತ್ವ

ಅರವತ್ತು, ಎಪ್ಪತ್ತರ ದಶಕದಲ್ಲಿ ಪ್ರಕೃತಿಯ ವಿನಾಶ ಹೆಚ್ಚಾದಂತೆ ಪರಿಸರ ರಕ್ಷಣೆಗೆ ಒತ್ತಡ ಹೆಚ್ಚಿತು. ಈ ನಿಟ್ಟಿನಲ್ಲಿ 1972 ರಲ್ಲಿ, ಜೂನ್ 5 ರಿಂದ 16 ರವರೆಗೆ ನಡೆದ ಮಾನವ ಪರಿಸರದ ಮೇಲಿನ ಸ್ಟಾಕ್‌ಹೋಮ್ ಸಮ್ಮೇಳನದಲ್ಲಿ, ವಿಶ್ವಸಂಸ್ಥೆಯು ಪರಿಸರದ ಮೇಲೆ ನಡೆಯುತ್ತಿರುವ ವಿಪರೀತ ಎನ್ನಬಹುದಾದ ಶೋಷಣೆ, ಪರಿಣಾಮ ಮತ್ತು ಪರಿಸ್ಥಿತಿಯ ಸುಧಾರಣೆಗೆ ಅಗತ್ಯವಾದ ಕ್ರಮಗಳ ಕುರಿತು ಚರ್ಚೆಗಳನ್ನು ನಡೆಸಿತು. ಅಂತಿಮವಾಗಿ ಪ್ರತಿ ವರ್ಷ ಜೂನ್ 5 ಅನ್ನು ವಿಶ್ವ ಪರಿಸರ ದಿನವನ್ನಾಗಿ ಆಚರಿಸಲು ನಿರ್ಧರಿಸಲಾಯಿತು.

ಮೊದಲ ವಿಶ್ವ ಪರಿಸರ ದಿನವನ್ನು 1973 ರಲ್ಲಿ "ಒಂದೇ ಭೂಮಿ" ಎಂಬ ಧ್ಯೇಯ ವಾಕ್ಯದ ಅಡಿಯಲ್ಲಿ ಆಚರಿಸಲಾಯಿತು.

ಸಾಗರ ಮಾಲಿನ್ಯ, ಪ್ಲಾಸ್ಟಿಕ್ ಮಾಲಿನ್ಯ, ವಾಯು ಮಾಲಿನ್ಯ, ಅಧಿಕ ಜನಸಂಖ್ಯೆ, ಸುಸ್ಥಿರ ಬಳಕೆ, ಜಾಗತಿಕ ತಾಪಮಾನ ಏರಿಕೆ, ಸುಸ್ಥಿರ ಅಭಿವೃದ್ಧಿ, ಆಹಾರ ಭದ್ರತೆ, ಅಕ್ರಮ ವನ್ಯಜೀವಿ ವ್ಯಾಪಾರ ಮತ್ತು ಸಮುದ್ರ ಮಟ್ಟ ಹೆಚ್ಚಳದಂತಹ ವಿಷಯಗಳ ಬಗ್ಗೆ ಜಾಗೃತಿ ಮೂಡಿಸುವುದು ವಿಶ್ವ ಪರಿಸರ ದಿನಾಚರಣೆಯ ಮುಖ್ಯ ಗುರಿಯಾಗಿದೆ. ಜಗತ್ತಿನ ಬಹುತೇಕ ಎಲ್ಲ ರಾಷ್ಟ್ರಗಳು, ಸಂಘ ಸಂಸ್ಥೆಗಳು, ಸರ್ಕಾರಗಳು ಮತ್ತು ಸರ್ಕಾರೇತರ ಸಂಸ್ಥೆಗಳು, ಪರಿಸರ ಸಮಸ್ಯೆಗಳು ಮತ್ತು ಅವುಗಳ ಪರಿಹಾರಗಳ ಕಡೆಗೆ ಪ್ರಪಂಚದಾದ್ಯಂತದ ಜನರ ಗಮನವನ್ನು ಸೆಳೆಯುವ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಈ ದಿನವನ್ನು ಆಚರಿಸುತ್ತವೆ.

ಜಗತ್ತಿನಾದ್ಯಂತ ಪ್ರತಿ ವರ್ಷ 430 ಮಿಲಿಯನ್ ಟನ್‌ಗಳಿಗಿಂತ ಹೆಚ್ಚು ಪ್ಲಾಸ್ಟಿಕ್ ಅನ್ನು ಉತ್ಪಾದಿಸಲಾಗುತ್ತದೆ, ಅದರಲ್ಲಿ ಅರ್ಧದಷ್ಟನ್ನು ಒಮ್ಮೆ ಮಾತ್ರ ಬಳಸಲು ಸಾಧ್ಯವಾಗುತ್ತದೆ.

ಅದರಲ್ಲಿ ಶೇಕಡಾ 10ಕ್ಕಿಂತ ಕಡಿಮೆ ಮರುಬಳಕೆ ಮಾಡಲಾಗುತ್ತದೆ. ಅಂದಾಜು 19-23 ಮಿಲಿಯನ್ ಟನ್ ಪ್ಲಾಸ್ಟಿಕ್ ಪ್ರತಿ ವರ್ಷ ಸಮುದ್ರ, ನದಿ ಮತ್ತು ಇತರ ಜಲ ಮೂಲಗಳನ್ನು ಸೇರುತ್ತದೆ.

ಮೈಕ್ರೋಪ್ಲಾಸ್ಟಿಕ್ಸ್, 5 ಮಿಮೀ ವ್ಯಾಸದವರೆಗಿನ ಸಣ್ಣ ಪ್ಲಾಸ್ಟಿಕ್ ಕಣಗಳು, ಆಹಾರ, ನೀರು ಮತ್ತು ಗಾಳಿಯಲ್ಲಿ ಸೇರಿ ಹೋಗುತ್ತವೆ ಭೂ ಗ್ರಹದಲ್ಲಿರುವ ಪ್ರತಿಯೊಬ್ಬ ವ್ಯಕ್ತಿಯು ವರ್ಷಕ್ಕೆ 50,000 ಪ್ಲಾಸ್ಟಿಕ್ ಕಣಗಳನ್ನು ಸೇವಿಸುತ್ತಾನೆ ಎಂದು ಅಂದಾಜು ಮಾಡಲಾಗಿದೆ.

> ತನ್ನ ಮಣ್ಣನ್ನು ನಾಶಪಡಿಸಿ ಕೊಳ್ಳುವ ರಾಷ್ಟ್ರವು ತನ್ನನ್ನು ತಾನೇ ನಾಶ ಪಡಿಸಿಕೊಳ್ಳುತ್ತದೆ.
> **-ಫ್ರಾಂಕ್ಲಿನ್ ಡಿ ರೂಸ್ ವೆಲ್ಟ್**

ಏಕ ಬಳಕೆಯ ಪ್ಲಾಸ್ಟಿಕ್ ಮಾನವನ ಆರೋಗ್ಯ ಮತ್ತು ಜೀವವೈವಿಧ್ಯಕ್ಕೆ ಹಾನಿ ಮಾಡುತ್ತದೆ ಮತ್ತು ಪರ್ವತದ ತುದಿಯಿಂದ ಸಾಗರ ತಳದವರೆಗಿನ ಪ್ರತಿಯೊಂದು ಪರಿಸರ ವ್ಯವಸ್ಥೆಯನ್ನು ಕಲುಷಿತಗೊಳಿಸುತ್ತದೆ.

ಈ ಸಮಸ್ಯೆಯನ್ನು ನಿಭಾಯಿಸಲು ಲಭ್ಯವಿರುವ ವಿಜ್ಞಾನ ಮತ್ತು ಪರಿಹಾರ ಗಳೊಂದಿಗೆ, ಸರ್ಕಾರಗಳು,-ಎನ್ ಜಿ ಒ ಗಳು ಕ್ರಮ ಜರುಗಿಸಬೇಕು.

ಪ್ಲಾಸ್ಟಿಕ್ ಮುಕ್ತ ಪರಿಸರ ನಿರ್ಮಾಣ ಆಗದಿದ್ದರೆ ಮಾನವ ಮತ್ತು ಪ್ರಾಣಿ ಸಂಕುಲ ಭೀಕರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ.

ವಿಜ್ಞಾನ ಈ ಪ್ರಮಾಣದಲ್ಲಿ ಆವಿಷ್ಕಾರಗೊಂಡಿರುವಾಗ ಪ್ಲಾಸ್ಟಿಕ್ ಬಳಕೆಗೆ ಪರ್ಯಾಯವಾಗಿ ಮತ್ತೊಂದು ವಸ್ತುವನ್ನು ಕಂಡುಕೊಳ್ಳಲು ಸಾಧ್ಯ ಇಲ್ಲವೇ ಎಂಬ ಪ್ರಶ್ನೆ ಮೂಡುತ್ತದೆ.

ಈಗಲೇ ಪ್ಲಾಸ್ಟಿಕ್ ಮುಕ್ತ ಊರು, ಜಿಲ್ಲೆ, ರಾಜ್ಯ ದೇಶ ಮತ್ತು ಜಗತ್ತನ್ನು ನಿರ್ಮಾಣ ಮಾಡಲು ದಿಟ್ಟ ಹೆಜ್ಜೆ ಇಡದಿದ್ದರೆ ಮುಂದಿನ ಪೀಳಿಗೆ ನಮ್ಮನ್ನು ಕ್ಷಮಿಸಲಾರದು. ಈ ವರ್ಷದ ವಿಶ್ವ ಪರಿಸರ ದಿನದ ಪ್ರಾಮುಖ್ಯತೆಯೂ ಇದೇ ಆಗಿದೆ.

ಪ್ಲಾಸ್ಟಿಕ್ ಮಾಲಿನ್ಯ ತಡೆಯಲು ಈ ಮಾರ್ಗಗಳನ್ನು ಅನುಸರಿಸಿ

ಪ್ಲಾಸ್ಟಿಕ್ ಮಾಲಿನ್ಯವು ಪರಿಸರ ವ್ಯವಸ್ಥೆ, ಜಲ ಹಾಗೂ ಜಲಚರ ಜೀವಿಗಳು, ವನ್ಯಜೀವಿಗಳು, ಮಾನವನ ಆರೋಗ್ಯ ಸೇರಿದಂತೆ ಹಲವು ವಿಚಾರಗಳಲ್ಲಿ ಸಮಸ್ಯೆಗಳನ್ನು ತಂದೊಡ್ಡುತ್ತಿದೆ. ಅಲ್ಲದೆ ಇದು ಇಂದು ಜಾಗತಿಕ ಸಮಸ್ಯೆಯಾಗಿದೆ.

ಜಗತ್ತಿನಾದ್ಯಂತ ಹಲವು ರಾಷ್ಟ್ರಗಳು ಪ್ಲಾಸ್ಟಿಕ್ ಮಾಲಿನ್ಯದ ವಿರುದ್ಧ ಜಾಗೃತಿ, ಹೋರಾಟ, ಅಭಿಯಾನಗಳನ್ನು ನಡೆಸುತ್ತಿವೆ. ಏಕ ಬಳಕೆಯ ಪ್ಲಾಸ್ಟಿಕ್ ನಿಷೇದಕ್ಕೂ ಒತ್ತು ನೀಡಿವೆ. ಆದರೂ ಪ್ಲಾಸ್ಟಿಕ್ ಬಳಕೆಯ ಪ್ರಮಾಣ ಕಡಿಮೆಯಾಗಿಲ್ಲ.

ಇಂದು ಪ್ಲಾಸ್ಟಿಕ್ ನಮ್ಮ ಜೀವನಸಂಗಾತಿಯಾಗಿದೆ ಎಂದರೂ ತಪ್ಪಾಗಲಿಕ್ಕಿಲ್ಲ. ತಿನ್ನುವ ಪ್ಲೇಟ್‌ನಿಂದ ಕುಡಿಯುವ ನೀರಿನವರೆಗೆ ಎಲ್ಲವೂ ಪ್ಲಾಸ್ಟಿಕ್ ಆಗಿದ್ದು, ಇವುಗಳಿಂದ ದೂರ ಉಳಿಯವುದು ಕಷ್ಟಸಾಧ್ಯವಾಗಿದೆ. ಆದರೂ ನಮ್ಮ ಜಗತ್ತಿನ ಭವಿಷ್ಯಕ್ಕಾಗಿ ಪ್ಲಾಸ್ಟಿಕ್ ನಿರ್ಮೂಲನೆ ಮಾಡುವುದು ಅವಶ್ಯವಾಗಿದೆ. ಪ್ಲಾಸ್ಟಿಕ್ ನಿರ್ಮೂಲನೆ ಮಾಡಿ ಪರಿಸರ ಉಳಿಸಲು ನಾವು ನೀಡಬಹುದಾದ ಕೊಡುಗೆ ಏನು? ಪ್ಲಾಸ್ಟಿಕ್ ಮಾಲಿನ್ಯ ತಡೆಯಲು ನಾವು ಅನುಸರಿಸುಬಹುದಾದ ಮಾರ್ಗಗಳೇನು ನೋಡಿ.

ಏಕ ಬಳಕೆಯ ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡಿ: ಪ್ಲಾಸ್ಟಿಕ್ ಚೀಲಗಳು, ನೀರಿನ ಬಾಟಲಿಗಳು, ಕಾಫಿ ಕಪ್, ಸ್ಟ್ರಾ ಮುಂತಾದ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳ ಬಳಕೆ ಕಡಿಮೆ ಮಾಡಿ. ಅದರ ಬದಲು ಮಣ್ಣು, ಗಾಜು, ಸ್ಟೀಲ್, ಬಟ್ಟೆ ಕವರ್ ಬಳಸಿ. ಶಾಂಪಿಂಗ್ ಹೋಗುವಾಗ ಮರೆಯದೇ ಬಟ್ಟೆಯ ಬ್ಯಾಗ್ ತೆಗೆದುಕೊಂಡು ಹೋಗಲು ಮರೆಯದಿರಿ.

ಪ್ಲಾಸ್ಟಿಕ್ ಸ್ಟ್ರಾ ಬಳಸಬೇಡಿ: ಎಳನೀರು, ಪಾನೀಯಗಳನ್ನು ಕುಡಿಯುವಾಗ ಪ್ಲಾಸ್ಟಿಕ್ ಸ್ಟ್ರಾಗಳನ್ನು ನೀಡಿದರೆ ನಿರಾಕರಿಸಿ. ಅದರ ಬದಲು ಮರು ಬಳಕೆಯ ಉತ್ಪನ್ನ ಅಥವಾ ಜೈವಿಕ ವಿಘಟನೆ ಹೊಂದುವ ಪರ್ಯಾಯಗಳನ್ನು ಬಳಸಿ. ಅನಿವಾರ್ಯ ಸಂದರ್ಭದಲ್ಲಿ ಸ್ಟ್ರಾ ಬಳಸಬೇಕಾದರೆ ಸ್ಟೀಲ್ ಅಥವಾ ಬಿದಿರಿನ ಸ್ಟ್ರಾ ಬಳಸಿ.

ಸಮರ್ಪಕ ವಿಧಾನದಲ್ಲಿ ತ್ಯಾಜ್ಯ ನಿರ್ವಹಣೆ: ಪ್ಲಾಸ್ಟಿಕ್ ತ್ಯಾಜ್ಯವನ್ನು ಮರುಬಳಕೆ ಮಾಡುವ ಮೂಲಕ ಮತ್ತು ಇತರ ತ್ಯಾಜ್ಯಗಳಿಂದ ಪ್ರತ್ಯೇಕಿಸುವ ಮೂಲಕ ಸರಿಯಾದ ರೀತಿಯಲ್ಲಿ ತ್ಯಾಜ್ಯ ವಿಲೇವಾರಿ ಮಾಡಿ. ನಿಮ್ಮ ಮನೆ ಹಾಗೂ ಕಚೇರಿ, ಕಾರ್ಯಕ್ರಮಗಳಲ್ಲಿ ಮರುಬಳಕೆಯ ವಸ್ತುಗಳಿಗೆ ಹೆಚ್ಚು ಆದ್ಯತೆ ಕೊಡಿ.

ಸ್ವಚ್ಛತಾ ಅಭಿಯಾನಗಳಲ್ಲಿ ಭಾಗವಹಿಸಿ: ಸಂಘ ಸಂಸ್ಥೆಗಳು, ಶಾಲಾ-ಕಾಲೇಜುಗಳು, ಸಮುದಾಯಗಳು ಆಯೋಜಿಸುವ ಸ್ವಚ್ಛತಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ. ನಿಮ್ಮ ಮನೆ ಹಾಗೂ ಸುತ್ತಲಿನ ಪ್ರದೇಶಗಳ ಸ್ವಚ್ಛತೆಗೆ ಆದ್ಯತೆ ನೀಡಿ.

ನಿಮ್ಮ ಊರಿನಲ್ಲಿ ಒಂದು ಸಂಘಟನೆ ಮಾಡಿಕೊಂಡು ಸ್ವಚ್ಛತಾ ಸಪ್ತಾಹಗಳನ್ನು ಆಯೋಜಿಸಿ. ಪರಿಸರ, ಜಲಮೂಲಗಳಿಗೆ ಪ್ಲಾಸ್ಟಿಕ್ ತ್ಯಾಜ್ಯ ಸೇರುವುದಕ್ಕೆ ತಡೆ ಹಾಕಿ.

ಸಾರ್ವಜನಕರಲ್ಲಿ ಅರಿವು ಮೂಡಿಸಿ: ಸ್ನೇಹಿತರು, ಕುಟುಂಬದವರು ಮತ್ತು ಸಮುದಾಯದವರಲ್ಲಿ ಪರಿಸರದ ಮೇಲೆ ಪ್ಲಾಸ್ಟಿಕ್ ಮಾಲಿನ್ಯದ ಪರಿಣಾಮದ ಬಗ್ಗೆ ಮಾಹಿತಿ ಹಂಚಿಕೊಳ್ಳಿ. ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡಲು ಮತ್ತು ಸಮರ್ಥನೀಯ ಪರ್ಯಾಯಗಳನ್ನು ಉತ್ತೇಜಿಸಲು ಪ್ರೋತ್ಸಾಹಿಸಿ.

ಸುಸ್ಥಿರ ಪ್ಯಾಕೇಜಿಂಗ್‌ಗೆ ಆದ್ಯತೆ ನೀಡಿ: ಶಾಪಿಂಗ್ ಮಾಡುವಾಗ ಕನಿಷ್ಠ ಪ್ಯಾಕೇಜಿಂಗ್ ಅಥವಾ ಪರಿಸರ ಸ್ನೇಹಿ ವಸ್ತುಗಳಿಂದ ಮಾಡಿದ ಪ್ಯಾಕೇಜಿಂಗ್ ಹೊಂದಿರುವ ಉತ್ಪನ್ನಗಳನ್ನು ನೋಡಿ ಆಯ್ಕೆ ಮಾಡಿ. ಸುಸ್ಥಿರ ಹಾಗೂ ಮರು ಬಳಕೆ ಮಾಡಬಹುದಾದ ಪ್ಯಾಕೇಜಿಂಗ್ ಇರುವ ವಸ್ತುಗಳ ಖರೀದಿಗೆ ಹೆಚ್ಚು ಆದ್ಯತೆ ನೀಡಿ.

ಪ್ಲಾಸ್ಟಿಕ್ ಮುಕ್ತ ಸಮಾಜದ ಸವಾಲು ಸ್ವೀಕರಿಸಿ: ಪ್ಲಾಸ್ಟಿಕ್ ಮುಕ್ತ ಸಮಾಜ ನಿರ್ಮಾಣ ಮಾಡುವ ಸವಾಲಿಗೆ ನಿಮ್ಮ ಒಡ್ಡಿಕೊಳ್ಳಿ. ಪ್ಲಾಸ್ಟಿಕ್ ರಹಿತ ಜೀವನವನ್ನು ನೀವು ಮೊದಲು ರೂಡಿಸಿಕೊಳ್ಳಿ. ನಂತರ ಅದನ್ನು ಅನುಸರಿಸಲು ಹಾಗೂ ಪಾಲಿಸಲು ಇತರರಿಗೆ ಸಲಹೆ ನೀಡಿ.

ಮರು ಬಳಕೆಯ ಪ್ಲಾಸ್ಟಿಕ್ ಬಳಸಿ: ಪ್ಲಾಸ್ಟಿಕ್ ಬಳಸುವುದು ಅನಿವಾರ್ಯ ಎನ್ನಿಸಿದರೆ ಮರು ಬಳಕೆ ಸಾಧ್ಯವಾಗುವ ಪ್ಲಾಸ್ಟಿಕ್‌ಗಳನ್ನು ಬಳಸಿ. ಇದರಿಂದ ಪ್ಲಾಸ್ಟಿಕ್ ಮಾಲಿನ್ಯವನ್ನು ಕಡಿಮೆ ಮಾಡಬಹುದು. ಮರು ಬಳಕೆಯ ಕಂಟೇನರ್, ಡಬ್ಬಿಗಳನ್ನು ಬಳಸಿ.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪ್ರತೀ ಹಳ್ಳಿಯಲ್ಲಿ ಸುಸ್ಥಿರ ಘನತ್ಯಾಜ್ಯ ನಿರ್ವಹಣಾ ವ್ಯವಸ್ಥೆ ಸ್ಥಾಪನೆಗೆ ಕ್ರಮ: ಸಚಿವ ಪ್ರಿಯಾಂಕ್ ಖರ್ಗೆ ಘೋಷಣೆ

ಬೆಂಗಳೂರು: ಪ್ರಸಕ್ತ ಸಾಲಿನ ಪರಿಸರ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯು ಸರ್ವ ಸನ್ನದ್ಧವಾಗಿ ತಯಾರಾಗಿದೆ.

ನಮ್ಮ ಮುಂದಿನ ಪೀಳಿಗೆಯ ಭವಿಷ್ಯದ ಹಿತದೃಷ್ಟಿಯಿಂದ ಸುಭದ್ರ ಸಮಾಜ, ಉತ್ತಮ ಶಿಕ್ಷಣದ ಜೊತೆಗೆ ಅತ್ಯಾವಶ್ಯಕವಾಗಿ ವಾಸಯೋಗ್ಯ ಪರಿಸರವನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಕೆಲಸ ಮಾಡಲು ನಮ್ಮ ಇಲಾಖೆ ಹಾಗೂ ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಸಂಬಂಧ ಪ್ರಕಟಣೆ ನೀಡಿರುವ ಅವರು ಪರಿಸರ ದಿನಾಚರಣೆ ಹಿನ್ನಲೆಯಲ್ಲಿ 2023ನೇ ಸಾಲಿನ 'ವಿಶ್ವ ಪರಿಸರ ದಿನದ' ಘೋಷವಾಕ್ಯ - "ಪ್ಲಾಸ್ಟಿಕ್ ಮಾಲಿನ್ಯ ಸೋಲಿಸಿ" ಅನುಗುಣವಾಗಿ, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆ ವತಿಯಿಂದ ನಾಡಿನ ಪ್ರತೀ ಹಳ್ಳಿಯಲ್ಲಿ ಸುಸ್ಥಿರ ಘನತ್ಯಾಜ್ಯ ನಿರ್ವಹಣಾ ವ್ಯವಸ್ಥೆ ಸ್ಥಾಪಿಸಲಾಗುವುದು ಎಂದು ಹೇಳಿದ್ದಾರೆ.

ಈ ಹಿನ್ನಲೆಯಲ್ಲಿ ಮೂರು ಪ್ರಮುಖ ಕ್ರಮಗಳನ್ನು ಇಲಾಖೆ ಕೈಗೊಂಡಿದ್ದು,

ಅವು ಹೀಗಿವೆ

ಕ್ರಮ 1 : ಬಹುಪಾಲು ಪ್ಲಾಸ್ಟಿಕ್ ಒಳಗೊಂಡ ಘನಾ ತ್ಯಾಜ್ಯ ವಿಲೇವಾರಿಯನ್ನು ಹಳ್ಳಿ ಮಟ್ಟದಿಂದಲೇ ಆರಂಭಿಸಲು ಪ್ರತಿ ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟ (GPLF) ಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲು ರಾಜ್ಯದ 5,951 ಗ್ರಾಮ ಪಂಚಾಯತಿಗಳಿಗೆ ಸೂಚಿಸಲಾಗಿದೆ. ಈ ಮೂಲಕ ರಾಜ್ಯದೆಲ್ಲೆಡೆ ಗ್ರಾಮೀಣ ಮಟ್ಟದಲ್ಲಿ ಪ್ಲಾಸ್ಟಿಕ್ ಬಳಕೆ ಮುಕ್ತಗೊಳಿಸಲು ಇಲಾಖೆ ದಿಟ್ಟ ಹೆಜ್ಜೆಯನ್ನು ಇರಿಸಿದೆ. ಈ ಕ್ರಾಂತಿಕಾರಿ ಕ್ರಮವು ಸ್ಥಳೀಯವಾಗಿ ಮಹಿಳಾ ಉದ್ಯೋಗವನ್ನೂ ಹೆಚ್ಚಿಸಲಿದೆ.

ಪ್ಲಾಸ್ಟಿಕ್ ಬಳಕೆಯನ್ನು ಕೊನೆಗಾಣಿಸಲು ಮೊದಲ ಹಂತವಾಗಿ ತ್ಯಾಜ್ಯದ ವೈಜ್ಞಾನಿಕ ವಿಲೇವಾರಿ ಅತೀ ಪ್ರಮುಖ ಅಂಶವಾಗಿದೆ. ತ್ಯಾಜ್ಯವನ್ನು ಮೂಲದಲ್ಲಿಯೇ ಹಸಿ ಮತ್ತು ಒಣ ಕಸವಾಗಿ ವಿಂಗಡಿಸಿ,

ಪ್ಲಾಸ್ಟಿಕ್ ಬೇರ್ಪಡಿಸಿ ಸುಸ್ಥಿರ ಗ್ರಾಮೀಣ ಪರಿಸರ ಸ್ಥಾಪಿಸಲು ಉದ್ದೇಶಿಸಲಾಗಿದೆ.

ಕ್ರಮ 2 : ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಅಡಿಯಲ್ಲಿ ಈ ಸಾಲಿನಲ್ಲಿ ಪ್ರತಿದಿನ ಹತ್ತು ಟನ್ ಗಿಂತಲೂ ಹೆಚ್ಚು ಘನತ್ಯಾಜ್ಯ ವಿಲೇವಾರಿ ಮಾಡಬಲ್ಲ MRF (Material Recovery Facility) ಗಳ ಸಂಖ್ಯೆಯನ್ನು ಪ್ರಸ್ತುತ 11ರಿಂದ ಜಿಲ್ಲೆಗೆ ಒಂದರಂತೆ 30ಕ್ಕೆ ಏರಿಕೆ ಮಾಡಲಿದೆ. ಪ್ಲಾಸ್ಟಿಕ್ ತ್ಯಾಜ್ಯದ ವಿರುದ್ಧದ ಈ ಹೋರಾಟದಲ್ಲಿ ಇದು ದೊಡ್ಡ ಬಲವನ್ನು ತುಂಬಲಿದೆ.

ಈ ಮೂಲಕ ಈ ವರ್ಷದ ಕೊನೆಗೆ ಇಲಾಖೆಯ ವತಿಯಿಂದ ಪ್ರತಿದಿನ 300 ಟನ್ ಘನತ್ಯಾಜ್ಯವನ್ನು ವೈಜ್ಞಾನಿಕ ವಾಗಿ ವಿಲೇವಾರಿ ಮಾಡಿ, ಈ ಘಟಕಗಳ ಸ್ವಾವಲಂಬಿ ನಿರ್ವಹಣೆಗೆ ಅದರಿಂದ ಆರ್ಥಿಕ ಆದಾಯದ ಮೂಲವನ್ನೂ ಸಹ ಕಂಡುಕೊಳ್ಳಲಾಗುವುದು.

ಕ್ರಮ 3: ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಪ್ಲಾಸ್ಟಿಕ್ ಬಳಕೆ ಮುಕ್ತಗೊಳಿಸುವ ಸಲುವಾಗಿ 'ಹಸಿರು' ಶಿಷ್ಟಾಚಾರ ಕಾರ್ಯಕ್ರಮವನ್ನು ಪ್ರಾರಂಭಿಕ ಹಂತದಲ್ಲಿ ರಾಜ್ಯ ಮಟ್ಟದದಲ್ಲಿ ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಯಲ್ಲಿ ಬರುವ

> ಪಂಚಾಯತ್ ರಾಜ್ ಸಚಿವಾಲಯ,
> ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
> ಇ-ಆಡಳಿತ ಕಚೇರಿ,
> ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಹಾಗೂ
> ಎಲ್ಲಾ ಜಿಲ್ಲಾ ಪಂಚಾಯತಿ ಕಚೇರಿಗಳಲ್ಲಿ ಇಂದಿನಿಂದಲೇ ಅನುಷ್ಠಾನಗೊಳಿಸಲಾಗುತ್ತಿದೆ.

ಈ ಎಲ್ಲಾ ಕಾರ್ಯಕ್ರಮಗಳ ಒಟ್ಟಾರೆ ಉದ್ದೇಶಗಳು ಏನೆಂದರೆ;

* ಗ್ರಾಮೀಣ ಭಾಗದಲ್ಲಿ ಪ್ಲಾಸ್ಟಿಕ್ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಿ ಪ್ಲಾಸ್ಟಿಕ್ ಬಳಕೆ ಮುಕ್ತಗೊಳಿಸುವುದು,
* MRFಗಳ ಮೂಲಕ ಪ್ಲಾ

ಕಿವುಡ ಮಕ್ಕಳ ಸರಕಾರಿ ಶಾಲೆ: ಸಹಾಯಕ ಶಿಕ್ಷಕರ ಅರ್ಜಿ ಅವಧಿ ವಿಸ್ತರಣೆ

ಬೆಳಗಾವಿ: ಕಿವುಡ ಮಕ್ಕಳ ಸರಕಾರಿ ಶಾಲೆಗೆ ಪದವಿದರ ಸಹಾಯಕ ಶಿಕ್ಷಕರನ್ನು ಅಂಶಕಾಲಿವಾಗಿ ಮಾಸಿಕ ಗೌರವಧನ ಗರಿಷ್ಟ ರೂ: 6,000 (ಆರುಸಾವಿರ) ರಂತೆ ಭೋಧನೆ ಮಾಡಲು ಒಟ್ಟು 3 (ಮೂರು) ಅಭ್ಯರ್ಥಿಗಳನ್ನು ಭರ್ತಿಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿಶೇಷ ಶಿಕ್ಷಣದಲ್ಲಿ ವಿದ್ಯಾರ್ಹತೆ ಹೊಂದಿರುವ ಬಿಎಡ್ (ಹೆಚ್ಐ) ಅಭ್ಯರ್ಥಿಗಳ ಅರ್ಜಿಗಳು ಬಾರದೇ ಇರುವದ-ರಿಂದ ಜೂ.10 2023 ರ ವರೆಗೆ ಅರ್ಜಿ ಅವಧಿ ವಿಸ್ತ-ರಿಸಲಾಗಿದೆ.

ಶ್ರವಣದೋಷವುಳ್ಳ ಮಕ್ಕಳಿಗೆ ಪಾಠ ಮಾಡಲು ವಿಶೇಷ ಶಿಕ್ಷಣ/ತರಬೇತಿ ಹೊಂದಿರುವವರಿಗೆ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು.

ಆಸಕ್ತರು ಜೂ. 10 2023 ರಒಳಗಾಗಿ ಅಧೀಕ್ಷಕರು ಕಿವುಡ ಮಕ್ಕಳ ಸರಕಾರಿ ಶಾಲೆ ಅಜಮ ನಗರ, ವಿದ್ಯಾಗಿರಿ ಬೆಳಗಾವಿ-590010 ಇವರಿಗೆ ಅಗತ್ಯ ದೃಢೀಕೃತ ದಾಖಲಾತಿಗಳೊಂದಿಗೆ ಖುದ್ದಾಗಿ ಭೇಟಿ ನೀಡಿ ಅಥವಾ ಅಂಚೆ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9901073686 ಅಥವಾ 9663711081 ಗೆ ಸಂಪರ್ಕಿಸಬಹುದು ಎಂದು ಕಿವುಡ ಮಕ್ಕಳ ಸರಕಾರಿ ಶಾಲೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾಹಿತಿ/ಕಲಾವಿದರ ಜೀವಿತ ಪ್ರಮಾಣ ಪತ್ರ ನೀಡಲು ಅವಕಾಶ

ಬೆಳಗಾವಿ: ಜೀವಿತ ಪ್ರಮಾಣ ಪತ್ರವನ್ನು ಸಲ್ಲಿಸದೆ ಇರುವ ಕಲಾವಿದರುಗಳು ನಿಗದಿತ ನಮೂನೆಯಲ್ಲಿ ಬ್ಯಾಂಕ್ ಅಧಿಕಾರಿಗಳ ಸಹಿ ಪಡೆದು ದಾಖಲೆಗಳೊಂದಿಗೆ ಜೂ. 15 2023 ರೊಳಗಾಗಿ ಬೆಳಗಾವಿಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಚೇರಿಗೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಬೆಳಗಾವಿ ಜಿಲ್ಲೆಯ 537 ಜನ ಸಾಹಿತಿ ಕಲಾವಿದ-ರಿಗೆ ಸೆ. 1 2022 ರಿಂದ ಅನ್ವಯವಾಗುವಂತೆ ಮಾಸಿಕ ರೂ.2,000/- ಮಾಶಾಸನ ಮಂಜೂರಾಗಿದ್ದು, 490 ಜನ ಕಲಾವಿದರ ಪಿಂಚಣಿ ಆದೇಶಗಳು ಕಚೇರಿಗೆ ಬಂದಿದ್ದು, ಇಲಾಖೆಯಿಂದ ಮಾಸಿಕ ರೂ. 2,000/- ಮಾಶಾಸನ ಪಡೆಯುತ್ತಿರುವ 1029 ಜನ ಸಾಹಿತಿ/ಕಲಾವಿದರು ಹಾಗೂ ರೂ. 500/- ವಿಧವಾ ಮಾಶಾಸನ ಪಡೆಯುತ್ತಿರುವ 44 ಜನ ಮಹಿಳೆಯರಿಗೆ ಮೇ. 2023 ರವರೆಗೆ ಪಾವತಿಸಲಾಗಿದೆ.

ಶೇಕಡಾ 50% ಕಲಾವಿದರು ಮಾತ್ರ ನಿಯಮಾವಳಿಯಂತೆ 2023-24 ನೇ ಸಾಲಿನ ಅವಧಿಯ ಜೀವಿತ ಪ್ರಮಾಣ ಪತ್ರವನ್ನು ನಿಗದಿತ ನಮೂನೆಯಲ್ಲಿ ದಾಖಲೆಗಳನ್ನು ಲಗತ್ತಿಸಿ ಕಚೇರಿಗೆ ಸಲ್ಲಿಸಿದ್ದಾರೆ.

ಸದರಿ ಕಲಾವಿದರು ಕಚೇರಿಯಿಂದ ಮಾಶಾಸನ ಮಂಜೂರಾತಿ ಕುರಿತು ಬರೆದ ಪತ್ರ ಹಾಗೂ ತಮ್ಮ ಎರಡು ಭಾವಚಿತ್ರದೊಂದಿಗೆ ಕಚೇರಿ ಸಮಯದಲ್ಲಿ ಬೆಳಗಾವಿಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಖುದ್ದಾಗಿ ಬೇಟಿ ನೀಡಿ ಪಿ.ಪಿ.ಓ. ಪಡೆಯಬಹುದು ಎಂದು ಬೆಳಗಾವಿಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿರುದ್ಯೋಗಿಗಳಿಗಾಗಿ ಸ್ವ ಉದ್ಯೋಗ ತರಬೇತಿ

ಬೆಳಗಾವಿ: ಬೆಳಗಾವಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ವತಿಯಿಂದ ನಗರದ ಗ್ರಾಮೀಣ ಪ್ರದೇಶದ ಯುವಕ, ಯುವತಿಯರಿಗೆ ಮತ್ತು ನಿರುದ್ಯೋಗಿಗಳಿಗೆ ಹೈನುಗಾರಿಕೆ ಮತ್ತು ಎರೆಹುಳು ಗೊಬ್ಬರ ತಯಾರಿಕೆ ಮತ್ತು ಕೋಳಿ ಸಾಕಾಣಿಕೆ 10 ದಿನಗಳ ತರಬೇತಿಯನ್ನು ಹಮ್ಮಿಕೊಳ್ಳಲಾಗುದು.

ತರಬೇತದಾರರಿಗೆ ಇರಬೇಕಾದ ಅರ್ಹತೆಗಳು: 18 ರಿಂದ 45 ವಯಸ್ಸಿನವರಾಗಿರಬೇಕು, ಗ್ರಾಮೀಣ ಪ್ರದೇಶದವರಾಗಿರಬೇಕು ಹಾಗೂ ಃಕಐ ಕಾರ್ಡ ಹೊಂದಿರಬೇಕು.ನೀಡಬೇಕಾದ ದಾಖಲಾತಿಗಳು: BPL ಕಾರ್ಡ, ಆಧಾರ ಕಾರ್ಡ, ಬ್ಯಾಂಕ ಪಾಸ್ ಬುಕ್,3 ಭಾವಚಿತ್ರಗಳು ಹೊಂದಿರಬೇಕು. ತರಬೇತಿಗೆ ಅರ್ಜಿ ನೀಡುವವರು ಕೋಳಿ ಸಾಕಾಣಿಕೆ ಅಥವಾ ಹೈನುಗಾರಿಕೆ ಮತ್ತು ಎರೆಹುಳು ಗೊಬ್ಬರ ತಯಾ-ರಿಕೆ, ಈ ಎರಡು ತರಬೇತಿಯಲ್ಲಿ ಒಂದು ತರಬೇತಿಗೆ ಅರ್ಜಿ ನೀಡಬಹುದು. ತರಬೇತಿಯಲ್ಲಿ ಊಟ, ವಸತಿ ಸಂಪೂರ್ಣ ಉಚಿತವಾಗಿರುತ್ತದೆ. ಜೂ.17 2023, ರಂದು ಅರ್ಜಿ ಸ್ವೀಕರಿಸುವ ಕೊನೆಯ ದಿನಾಂಕವಾಗಿದ್ದು, ಅರ್ಜಿಯನ್ನು ಸಂಸ್ಥೆಯ ಅರ್ಜಿ ನಮೂನೆಯಲ್ಲಿ ಅಥ-ವಾ ಬಿಳಿಹಾಳಿಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ ಅಥವಾ ಇಮೇಲ್‌ಗೆ Email: cbrsetibelagavi@gmail.com ಗೂಗಲ್ ಫಾರ್ಮ ಲಿಂಕನಲ್ಲಿ ಸಲ್ಲಿಸಬಹುದಾಗಿದೆ.ಸಂಸ್ಥೆಯ ವಿಳಾಸ : ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ), ಪ್ಲಾಟ ನಂ. ಸಿಎ -03 (ಪಾರ್ಟ) ಕಣಬರ್ಗಿ ಇಂಡಸ್ಟ್ರಿಯಲ್ ಎರಿಯಾ, ಆಟೋ ನಗರ. ಬೆಳಗಾವಿ - 590015. ದೂರವಾಣಿ ಸಂಪರ್ಕ ಸಂಖ್ಯೆ 0831-2440644, 8296792166, 9845750043, 8050406866, 8867388906, 9449860564 ಗೆ ಬೆಳಿಗ್ಗೆ 9.30 ರಿಂದ ಸಂಜೆ 6 ವರೆಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಅಭಿವೃದ್ಧಿ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಸಾಮಾಜಿಕ ಪರಿಶೋಧನೆಗೆ ನೆರವಾಗಬೇಕು: ಅಪರ ಮುಖ್ಯ ಕಾರ್ಯದರ್ಶಿಗಳು ಎಲ್.ಕೆ.ಅತೀಕ್

ಬೆಳಗಾವಿ: ಅಭಿವೃದ್ಧಿ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಸಾಮಾಜಿ-ಕ ಪರಿಶೋಧನೆಗೆ ನೆರವಾಗಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿಗಳಾದ ಎಲ್.ಕೆ. ಅತೀಕ್ ರವರು ಸೂಚಿಸಿದ್ದಾರೆ.

ನಗರದ ಭಾಗ್ಯ ನಗರದಲ್ಲಿರುವ ಆಲ್ ಇಂಡಿಯನ್ ಇನಸ್ಟಿಟ್ಯೂಟ್ ಆಫ್ ಲೋಕಲ್ ಸೆಲ್ಫ್ ಗೌರ್ನೆನ್ಸ್ ಬೇತಿಕೇಂದ್ರದಲ್ಲಿಂದು, **NIRD PR** ಹೈದರಾಬಾದ್, ANS SIRD PR ಮೈಸೂರು ಹಾಗೂ ರಾಜ್ಯ ಸಾಮಾಜಿ-ಕ ಪರಿಶೋಧನೆ ನಿರ್ದೇಶನಾಲಯ ದಸಹಯೋಗದಲ್ಲಿ ಆರಂಭವಾದ 30 ದಿನಗಳ ಸಾಮಾಜಿಕ ಪರಿಶೋಧನೆ ಪ್ರಮಾಣೀಕ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಧ್ವನಿ ಮುದ್ರಿತ ಸಂದೇಶದಲ್ಲಿ ಅಪರ ಮುಖ್ಯ ಕಾರ್ಯದರ್ಶಿಗಳು ಮಾತನಾಡಿದರು.

ಪಂಚಾಯತ ರಾಜ್ ಅಪರ ಮುಖ್ಯಕಾರ್ಯದರ್ಶಿ ಉಮಾಮಹಾದೇವ ಅವರು, ಜನರ ಅಧಿಕಾರದ ದೃಷ್ಟಿಕೋನದಿಂದ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಜನರ ಹಕ್ಕು ಮತ್ತು ಅಧಿಕಾರಗಳನ್ನು ಖಾತರಿಪಡಿಸಲು ಸಾಮಾಜಿಕ ಪರಿಶೋಧನೆ ನೆರವಾಗಬೇಕು.

ವಿಶೇಷವಾಗಿ ದುರ್ಬಲ ವರ್ಗದವರಿಗೆ ಸಿಗಬೇಕಾದ ಅವಕಾಶ ಗಳನ್ನು ಖಚಿತಪಡಿಸಬೇಕು.

ಈ ನಿಟ್ಟಿನಲ್ಲಿ ಸಾಮಾಜಿ-ಕ ಪರಿಶೋಧಕರು ಹೆಚ್ಚು ಅಧ್ಯಯನಾರ್ಥಿಗಳಾಗಿ ಗುಣಾತ್ಮಕ ಕಾರ್ಯದಲ್ಲಿತೊಡಗಿಕೊಳ್ಳಬೇಕು ಎಂದು ತಿಳಿಸಿದರಲ್ಲದೇ, ಸಾಮಾಜಿಕ ಪರಿಶೋಧನೆ ಇತರೆ ಆಡಿಟ್ಪ್ರಕ್ರಿಯೆಗಳಿಗಿಂತ ಭಿನ್ನವಾಗಿದ್ದು, ಜನರ ಒಳಗೊಳ್ಳುವಿಕೆಯ ಮೂಲಕ ಅನುಷ್ಠಾನ ಸಂಸ್ಥೆಗಳ ಕಾರ್ಯಕ್ಷಮತೆ ವೃದ್ಧಿಸಲು, ವ್ಯವಹರಣೆಗಳನ್ನು ಪಾರದರ್ಶಕವಾಗಿಡಲು, ಕಮೌಲ್ಯಗಳನ್ನು ನೈತಿ-ಬಲಪಡಿಸಲು ಸಾಧ್ಯವಾಗಬೇಕು ಎಂದು ನುಡಿದರು.

ಆನ್ ಲೈನ್ ಮೂಲಕ ಮಾತನಾಡಿದ ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯದ ನಳಿನ್ ಅತುಲ್ ಅವರು, ರಾಜ್ಯದಲ್ಲಿ ನಡೆದಿರುವ ಸಾಮಾಜಿಕ ಪರಿಶೋಧನಾ ಪ್ರಕ್ರಿಯೆಗಳು ಧನಾತ್ಮಕ ನಿಟ್ಟಿನಲ್ಲಿ ದೇಶದಾದ್ಯಂತ ಗಮನಸೆಳೆದಿದೆ. ಸಾಮಾಜಿಕ ಪರಿಶೋಧಕರು ಕಾರ್ಯಕ್ಷೇತ್ರದ ಮಾಹಿತಿಗಳನ್ನು ಗ್ರಹಿಸಿ, ಗ್ರಾಮೀಣ-ರಿಗೆ ಯೋಜನೆಯ ಒದಗಿಸಿ, ಮಾಹಿತಿಗಳನ್ನು ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವಂತಾಗಬೇಕು ಎಂದು ನುಡಿದರು.

ANS SIRD PR ಮೈಸೂರಿನ ನಿರ್ದೇಶಕರಾದ ಲಕ್ಷ್ಮೀಪ್ರಿಯಾ ರವರು ಮಾತನಾಡಿ, ಯೋಜನೆಯ ಮೂಲ ಆಶಯಗಳನ್ನು ಬಲಪಡಿಸಲು ಸಾಮಾಜಿಕ ಪರಿಶೋಧಕರು ತರಬೇತಿಯ ಅಂಶಗಳನ್ನು ಸರಿಯಾಗಿ ಅರ್ಥೈಸಿ ,ಕೊಂಡು ಕಾರ್ಯನಿರ್ವಹಿಸಬೇಕು ಎಂದರು.

ತರಬೇತಿ ಕೇಂದ್ರದಲ್ಲಿ ಖುದ್ದು ಉಪಸ್ಥಿತ-ರಿದ್ದ ANS SIRD PR ಮೈಸೂ-ರಿನ ಕೇಂದ್ರಕಛೇರಿಯ ಬೋಧಕರು ಹಾಗೂ ತರಬೇತಿ ಸಂಯೋಜಕರಾದ ಸಿ.ವಿಜಯಕುಮಾರ ತರಬೇತಿಯ ಮಾರ್ಗ ಸೂಚಿಗಳನ್ನು ವಿವರಿಸಿದರು.

30 ದಿನಗಳ ಪ್ರಮಾಣೀಕರಣ ತರಬೇತಿಯಲ್ಲಿ ಪ್ರಶಿಕ್ಷಣಾರ್ಥಿಗಳ ಕಲಿಕೆಯ ಪ್ರವೃತ್ತಿಯನ್ನು ಬಾಹ್ಯಮೌಲ್ಯ ಮಾಪಕರು ಪರೀಕ್ಷೆ ನಡೆಸುವರು. ಪ್ರಮಾಣೀಕರಣ ಉತ್ತೀರ್ಣರಾದವರು ತರಬೇತಿಯಲ್ಲಿ ಸಾಮಾಜಿ-ಕ ಪರಿಶೋಧಕರಾಗಿ ಮುಂದು ವರೆಯಲು ಅವಕಾಶ ವಿದೆ ಎಂದು ಹೇಳಿದರು.

30 ದಿನಗಳ ತರಬೇತಿಯ Lead Course Coordinator ಆಗಿರುವ ರಾಜ್ಯ ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯದ ಅಧಿಕಾರಿ ಕೇಶವಮೂರ್ತಿ ಯವರು ತರಬೇತಿ ಅವಧಿಯ ಅಧಿವೇಶನದ ವಿಷಯಗಳನ್ನು ವಿವರಿಸಿದರು.

ಮೊದಲ ದಿನದ ಅಧಿವೇಶನದಲ್ಲಿ, ಸಾಮಾಜಿಕ ಪರಿಶೋಧನೆ ಕುರಿತು, ತೆಲಂಗಾಣ ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯದ ಸೌಮ್ಯ ಕೆಡಂಬಿ, ಭಾರತ ಸಂವಿಧಾನ ಅಧಿವೇಶನವನ್ನು ನಗರದ ವಂಟಮುರಿ ಪ್ರೌಢಶಾಲಾ ಶಿಕ್ಷಕರಾದ ಅಕ್ಕಮ್ಮ ವಿ. ಕುರಣೆಯವರು ನಡೆಸಿಕೊಟ್ಟರು.

ತರಬೇತಿಯ ಆರಂಭದಲ್ಲಿ ವಿಶ್ವ ಪರಿಸರ ದಿನದ ಅಂಗವಾಗಿ, ಗಿಡಕೆ ,ನೀರೆರೆದು, ನಾಡಗೀತೆಯ ಮೂಲಕ ತರಬೇತಿ ಆರಂಭಿಸಲಾಯಿತು.

ಬಿಜೆಪಿ ಸಂಸದ ಬ್ರಿಜ್ ಭೂಷಣ ಸಿಂಗ್ ಬಂಧನಕ್ಕೆ ಆಗ್ರಹಿಸಿ ಪ್ರತಿಭಟನೆ

ಬೆಳಗಾವಿ: ದೇಶದ ಕುಸ್ತಿಪಟುಗಳಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪಿ, ಭಾರತದ ಕುಸ್ತಿ ಫೆಡರೇಷನ್ ಅಧ್ಯಕ್ಷ ಹಾಗೂ ಬಿಜೆಪಿ ಸಂಸದ ಬ್ರಿಜ್ ಭೂಷಣ ಸಿಂಗ್ ಅವರನ್ನು ತಕ್ಷಣವೇ ಬಂಧಿಸುವಂತೆ ಒತ್ತಾಯಿಸಿ ವಿವಿಧ ಸಂಘಟನೆಗಳು ಪ್ರತಿಭಟನೆ ನಡೆಸಿದರು.ರಾಷ್ಟ್ರಪತಿಗಳು ಕೂಡಲೇ ಮಧ್ಯ ಪ್ರವೇಶಿಸಿ ಆರೋಪಿ ಬ್ರಿಜ್ ಭೂಷಣಸಿಂಗ್‌ನನ್ನು ಭಾರತ ಕುಸ್ತಿ ಫೆಡರೇಷನ್ ಅಧ್ಯಕ್ಷ ಸ್ಥಾನದಿಂದ ತಕ್ಷಣ ಕಿತ್ತು ಹಾಕಿ ಬಂಧಿಸಬೇಕು. ನಿಷ್ಪಕ್ಷಪಾತ ತನಿಖೆ ನಡೆಸಿ ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದರು.

ಒಲಿಂಪಿಕ್ ಪದಕ ವಿಜೇತರು, ವಿಶ್ವ ಚಾಂಪಿಯನ್ ಕುಸ್ತಿಪಟುಗಳ ಮೇಲೆ ಲೈಂಗಿಕ ಕಿರುಕುಳ ನೀಡಿದ ಆರೋಪಿ ಬ್ರಿಜ್ ಭೂಷಣ್‌ಸಿಂಗ್ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು. ನವದೆಹಲಿಯ ಜಂತರ್ ಮಂಥರ್‌ನಲ್ಲಿ ಭಜರಂಗ್ ಪೂನಿಯಾ ಸೇರಿದಂತೆ ದೇಶದ ಹಲವು ಕುಸ್ತಿ ಕ್ರೀಡಾಪಟುಗಳು ಕಳೆದ 45 ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದರೂ, ಆರೋಪಿಯನ್ನು ಈವರೆಗೆ ಬಂಧಿಸಿಲ್ಲ ಎಂದು ಪ್ರತಿಭಟನಾಕಾರರು ಅಸಮಾಧಾನ ವ್ಯಕ್ತಪಡಿಸಿದರು.

ಭಾರತೀಯ ಕೃಷಿಕ ಸಮಾಜದ ರಾಜ್ಯಾಧ್ಯಕ್ಷ ಸಿದಗೌಡ ಮೊದಗಿ ಮಾತನಾಡಿ, ರಾಷ್ಟ್ರಕ್ಕೆ ಕೀರ್ತಿ ತಂದು ಕೊಟ್ಟ ಕ್ರೀಡಾಪಟುಗಳಿಗೆ ಲೈಂಗಿಕ ಕಿರುಕುಳ ನೀಡಿದ್ದು, ಇಡೀ ದೇಶವೇ ತಲೆ ತಗ್ಗಿಸುವಂತದ್ದು. ಸಾಮಾಜಿ-ಕ ನ್ಯಾಯದಡಿಯಲ್ಲಿ ಸಂಸತ್ ಸ್ಥಾನದಿಂದ ಬ್ರಿಜ್ ಭೂಷಣ್‌ಸಿಂಗ್‌ನನ್ನು ವಜಾ ಮಾಡಬೇಕು. ಆ ಸ್ಥಾನದಲ್ಲಿ ಕುಳಿತುಕೊಳ್ಳಲು ಆತ ಯೋಗ್ಯನಲ್ಲ. ಆತ ಓರ್ವ ಕಾಮುಕ ವ್ಯಕ್ತಿಯಾಗಿದ್ದು, ತಕ್ಷಣವೇ ಬಂಧಿಸಬೇಕು.

ಇಂದು ಸಾಂಕೇತಿಕವಾಗಿ ಪ್ರತಿಭಟನೆ ನಡೆಸಿ, ಮನವಿ ಸಲ್ಲಿಸಿದ್ದೇವೆ. ಜೂ.5ರಂದು ದೊಡ್ಡ ಪ್ರಮಾಣದ ಪ್ರತಿಭಟನೆ ಮಾಡುತ್ತೇವೆ ಎಂದು ಎಚ್ಚ-ರಿಕೆ ನೀಡಿದರು.ರೈತ ಮುಖಂಡೆ ಜಯಶ್ರೀ ಗುರನ್ನವರ ಮಾತನಾಡಿ, ಇಡೀ ದೇಶ ಮತ್ತು ವಿಶ್ವಕ್ಕೆ ಕೀರ್ತಿ ತಂದ ಮಹಿಳಾ ಕ್ರೀಡಾಪಟುಗಳು ಇಂದು ಬೀದಿಗೆ ಬೀಳುವ ಪರಿಸ್ಥಿತಿ ನಿರ್ಮಾಣವಾಗಿದೆ. ಇಂತಹ ಸಂದರ್ಭದಲ್ಲಿ ಆರೋಪಿ ಬ್ರಿಜ್ ಭೂಷಣ ಸಿಂಗ್‌ಗೆ ಸಂಸತ್ತಿನಲ್ಲಿ ಪ್ರಧಾನಮಂತ್ರಿ ಮೋದಿ ಅವರು ಸನ್ಮಾನ ಮಾಡುತ್ತಿದ್ದಾರೆ. ಇದೇ ಏನು ನಿಮ್ಮ ಬೇಟಿ ಬಚಾವೊ ಬೇಟಿ ಪಡಾವೊ ಘೋಷಣೆ ಅರ್ಥ. ಅಂತಾರಾಷ್ಟ್ರೀಯ ಮಟ್ಟದಲ್ಲಿ ದೇಶದ ಮಾನವನ್ನು ತಾವು ಹರಾಜು ಹಾಕುತ್ತಿದ್ದಾರೆ. ನಿಜವಾಗಲೂ ನಿಮಗೆ ಬೇಟಿ ಬಚಾವೊ,ಬೇಟಿ ಪಡಾವೊ ಕಾಲಜಿ ಇದ್ದರೆ ತಕ್ಷಣವೇ ಆತನನ್ನು ಬಂಧಿಸಿ ಕಾನೂನಿಗೆ ಒಳಪಡಿಸಬೇಕು ಎಂದು ಆಗ್ರಹಿಸಿದರು.

ವಿಶ್ವ ಪರಿಸರ ದಿನ ಆಚರಣೆ

ಬೆಳಗಾವಿ: ವೃಕ್ಷಾರೋಪಣವು ಪ್ರಕೃತಿಯು ನಮಗೆ ನೀಡಿದ ವರಗಳಿಗೆ ಪ್ರತಿ ಸೇವೆಯಾಗಿದೆ ಎಂದು ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದ ಡಾ. ಎಸ್ ಸಿ ಧಾರವಾಡ ಅವರು ಮಾತನಾಡುತ್ತಿದ್ದರು. ಅವರು ಬೆಳಗಾವಿ ನಗರದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಆವರಣದಲ್ಲಿ ವಿಶ್ವ ಪರಿಸರ ದಿನಾರಣೆಯ ಅಂಗವಾಗಿ ಸಸಿ ನೆಡುತ್ತಾ ಮಾತನಾಡುತ್ತಿದ್ದರು.

ಪ್ರಕೃತಿಯು ನಮಗೆ ಸ್ವಚ್ಛವಾದ ಗಾಳಿ, ನೀರು, ವಾಸಿಸಲು ಮನೆ, ಸೇವೆಸಲು ಆಹಾರ ಹೀಗೆ ಅನೇಕ ಅವಶ್ಯಕತೆಗಳಿಗೆ ಮಾನವ ಪರಿಸರದಮೇಲೆ ಅವಲಂಬಿತನಾಗಿದ್ದಾನೆ. ಆದರೆ ಇತ್ತೀಚಿನ ದಿನಗಳಲ್ಲಿ ಹಾಳಾಗುತ್ತಿರುವ ಪರಿಸರವನ್ನು ಮತ್ತೆ ಸ್ವಚ್ಛವಾಗಿಡಲು ಯತೇಚ್ಛವಾಗಿ ಗಿಡಗಳನ್ನು ನೆಡಬೇಕು. ಅದರಲ್ಲಿಯೂ ಪ್ಲಾಸ್ಟಿಕ ಬಳಕೆಯಿಂದ ದೂರವಿರಬೇಕು.

ಪ್ಲಾಸ್ಟಿಕ್ ಇಂದು ನಮ್ಮ ಜೀವನದಲ್ಲಿ ಹಾಸುಹೊಕ್ಕಗಿದೆ. ಪ್ರತಿ ಖರೀದಿ ಪ್ರತಿ ಕೆಲಸದಲ್ಲಿಯೂ ಪ್ಲಾಸ್ಟಿಕ್ ಬಳಕೆಯು ಯತೇಚ್ಛವಾಗಿ ಸಾಗುತ್ತಲೇ ಇದೆ. ಇದೇ ರೀತಿ ಮುಂದುವರೆದರೆ ಪರಿಸರ ನಾಶವಾಗಿ ಮನುಕುಲಕ್ಕೆ ಆಗುವ ತೊಂದರೆಯ ದಿನಗಳು ದೂರವೇನಿಲ್ಲ.

ದ್ದರಿಂದ ಇಂದೇ ಪ್ಲಾಸ್ಟಿಕ ಬಳಕೆಯನ್ನು ನಿರಾಕರಿಸಿ ಅದರ ಬದಲಾಗಿ ಬದಲಾದ ಉಪಾಯಗಳನ್ನು ಅನುಸರಿಸುವದು ಒಳಿತು. ಇದರಿಂದ ಪ್ರತಿಯೊಬ್ಬರೂ ಪ್ರತಿನಿತ್ಯವೂ ಆರೋಗ್ಯಯುತ ಜೀವನ ನಡೆಸಬಹುದಾಗಿದೆ ಎಂದು ತಿಳುವಳಿಕೆ ನೀಡಿದರು.

ಈ ಸಂದರ್ಭದಲ್ಲಿ ಆಸ್ಪತ್ರೆಯ ಮೆಡಿಸಿನ್ ವಿಭಾಗದ ಮುಖ್ಯಸ್ಥರಾದ ಡಾ. ಶ್ರೀನಿವಾಸ ಬಿ, ಕ್ಷ-ಕಿರಣ ವಿಬಾಗದ ವೈದ್ಯರಾದ ಡಾ. ವಿನಾಯಕ ಟೊಣ್ಣಿ, ತುರ್ತುವಿಬಾಗದ ವೈದ್ಯಾಧಿಕಾರಿ ಡಾ. ಜೀವನ್ ಜೋಶಿ ಹಾಗೂ ಯು ಎಸ್ ಎಮ್ ಕೆ ಎಲ್ ಇ ಯ ವೈದ್ಯ ವಿದ್ಯಾರ್ಥಿಗಳು ಮತ್ತು ಆಸ್ಪತ್ರೆಯ ಸಮಸ್ತ ಸಿಬ್ಬಂದಿಗಳು ಸಸಿ ನೀಡುವ ಕಾರ್ಯಕ್ರಮದ ಭಾಗವಹಿಸಿದ್ದರು.

ಕೃಷಿ ಪಂಪ್‌ಸೆಟ್‌ಗೆ ಹಗಲಿನಲ್ಲೇ ವಿದ್ಯುತ್ ಕೊಡಿ

ಹುಬ್ಬಳ್ಳಿ: ಕೃಷಿ ಪಂಪ್‌ಸೆಟ್‌ಗಳಿಗೆ ಹಗಲು ಹೊತ್ತಿನಲ್ಲಿಯೇ ವಿದ್ಯುತ್ ಕೊಡಬೇಕು. ಯಾವುದೇ ಕಾರಣಕ್ಕೂ ರಾತ್ರಿ ವೇಳೆ ವಿದ್ಯುತ್ ಕೊಡುವುದು ಬೇಡ. ರಾತ್ರಿ ವಿದ್ಯುತ್ ಪೂರೈಸುವುದನ್ನು ಒಪ್ಪುವುದಿಲ್ಲ. ಹಗಲಿನಲ್ಲೇ ವಿದ್ಯುತ್ ಪೂರೈಕೆ ಮಾಡಲು ರಾಜ್ಯ ಸರ್ಕಾರಕ್ಕೆ ಕೂಡಲೇ ಪತ್ರ ಬರೆದು ಸೂಚಿಸುತ್ತೇನೆ ಎಂದು ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಕಿತ್ತೂರ ಕರ್ನಾಟಕ ಭಾಗದ ರೈತರ ನಿಯೋಗದಿಂದ ತಮ್ಮ ತೊಡದ ಮನೆಯಲ್ಲಿ ಮನವಿ ಸ್ವೀಕರಿಸಿದ ಹೊರಟ್ಟಿ ಅವರು ಮಾತನಾಡಿದರು.

ರೈತರಿಗೆ ಅಪರಾತ್ರಿಯಲ್ಲಿ ತ್ರಿಫೇಸ್ ವಿದ್ಯುತ್ ಸಂಪರ್ಕ ನೀಡುತ್ತಾರೆ. ಆ ಸಮಯದಲ್ಲಿ ಹೊಲಗಳಿಗೆ, ತೋಟಗಳಿಗೆ ತೆರಳಿ ನೀರು ಹರಿಸಲು ಬಹಳಷ್ಟು ತೊಂದರೆಯಾಗುತ್ತದೆ. ಕಾರಣ ಹಗಲು ಹೊತ್ತಿನಲ್ಲೇ ವಿದ

ಪರಿಸರವನ್ನು ಮಕ್ಕಳಂತೆ ಸಂರಕ್ಷಿಸಿ: ಮೊಹ್ಮದಸಾಬ್

ಬೆಳಗಾವಿ: "ಪರಿಸರದಲ್ಲಿ ಇಂಗಾಲದ ಡೈ ಆಕ್ಸೈಡ್ ನ್ನು ಹಿಡಿದಿಟ್ಟು ಕೊಂಡು ಆಮ್ಲಜನಕ ಒದಗಿಸುವ ಮೂಲಕ ಪರಿಸರ ಸಂರಕ್ಷಣೆಯಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಹೀಗಾಗಿ, ಪರಿಸರ ಕಾಪಾಡಿಕೊಂಡು ಹೋಗುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ " ಎಂದು ಶಾಲೆಯ ಆಡಳಿತ ಮಂಡಳಿಯ ಮುಖ್ಯಸ್ಥರಾದ ಮೊಹ್ಮದಸಾಬ್ ಹೇಳಿದರು.

ಇಲ್ಲಿನ ವೈಭವ ನಗರದ ಅಲ್ - ಪುರ್ಕಾನ್ ಏಜ್ಯುಕೇಶನ್ ಸೊಸೈಟಿಯ ಮದ್ನಿ ಆಂಗ್ಲ ಮಾಧ್ಯಮ ಪ್ರೌಢ ಶಾಲೆ ವತಿಯಿಂದ ವಿಶ್ವ ಪರಿಸರ ದಿನಾಚರಣೆ ನಿಮಿತ್ತ ಸಸಿ ನೆಡುವ ಮೂಲಕ ಪರಿಸರ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು,

ಶಿಕ್ಷಕರು ಹಾಗೂ ಶಾಲಾ ಮಕ್ಕಳು ಪರಿಸರ ಬಗ್ಗೆ ಜಾಗೃತಿ ಮೂಡಿಸಿದರು.

ಶಾಲೆಗಳಲ್ಲಿ ಸಣ್ಣ ತರಗತಿಗಳಿಂದಲೇ ಪಠ್ಯಗಳಲ್ಲಿ ಪರಿಸರದ ಬಗ್ಗೆ ಮಾಹಿತಿ ನೀಡುವ ಮೂಲಕ ಮಕ್ಕಳಲ್ಲಿ ಅರಿವು ಮೂಡಿಸುವ ಕೆಲಸ ಮಾಡಬೇಕು. ವಾರದಲ್ಲಿ ಒಂದು ಅವಧಿಯಾದರೂ ಪರಿಸರದ ಬಗ್ಗೆ ಮಾಹಿತಿ ನೀಡುವ ಮೂಲಕ ಚಿಕ್ಕ ವಯಸ್ಸಿನಿಂದಲೇ ಪರಿಸರದ ಬಗ್ಗೆ ಉತ್ತಮ ಅಭಿಪ್ರಾಯ ಹೊಂದಲು ಸಹಕಾರಿಯಾಗಬಹುದು.

ಪರಿಸರದ ಪ್ರಾಮುಖ್ಯತೆಯು ಕುರಿತು ಪ್ರಚಾರ ನೀಡಬೇಕು. ಮನೆಯ ಸುತ್ತಲಿನ ಜಾಗಗಳಲ್ಲಿ ಸಸಿಗಳನ್ನು ನೆಡುವ ಕಾರ್ಯಗಳಾಬೇಕಿದೆ. ನಮಗೆ ನೆರಳು ನೀಡುವುದರ ಜತೆ ಆರೋಗ್ಯ ವೃದ್ಧಿಗೆ ಮರಗಳು ಆಸರೆಯಾಗುತ್ತವೆ. ಮಕ್ಕಳು ಪರಿಸರ ಬಗ್ಗೆ ಆಳವಾಗಿ ಅಧ್ಯಯನ ಮಾಡಬೇಕಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಲಾ (ಸಿ ಆರ್ ಪಿ) ದೀಪಾ ಉಳ್ಳಾಗಡ್ಡಿ, ಶಾಲಾ (ಸಿಇಓ) ಗೀತಾ ತಿಗಡಿ, ಪಾಲಿಕೆ ಸದಸ್ಯ ಬಂದೇನವಾಜ್ ಹಾಗೂ ಶಾಲಾ ಪ್ರಾಚಾರ್ಯ , ಸಿಬ್ಬಂದಿ, ವಿದ್ಯಾರ್ಥಿಗಳು ಇತರರು ಇದ್ದರು.

ಪಾಲಿಕೆಯ ಅಧಿಕಾರಿಗಳ ವಿರುದ್ಧ ಸದಸ್ಯರ ದೂರು

ಬೆಳಗಾವಿ: ಪಾಲಿಕೆಯ ಅಧಿಕಾರಿಗಳ ದಿವ್ಯ ನಿರ್ಲಕ್ಷ್ಯದಿಂದ ನಗರದಲ್ಲಿರುವ ನಾಲಾಗಳನ್ನು ಶುಚಿಗೊಳಿಸುವಲ್ಲಿ ವಿಫಲರಾಗಿದ್ದಾರೆ ಎಂದು ಪಾಲಿಕೆಯ ಸದಸ್ಯರು ಮೇಯರ್ ಎದುರು ದೂರಿದರು.

ಸೋಮವಾರ ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ಮೇಯರ್ ನೇತೃತ್ವದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ನಗರ ಸದಸ್ಯರು ಮಾತನಾಡಿ, ನಗರದಲ್ಲಿ ನಾನಾ ಶುಚಿಗೊಳಿಸಲು ಜೆಸಿಬಿಯಿಂದ ಸಾಧ್ಯವಿಲ್ಲ. ಅಧಿಕಾರಿಗಳ ಹಿಟಾಚಿಯಿಂದ ನಾಲಾ ಶುಚಿಗೊಳಿಸಬೇಕು. ನಾಲಾಗಳನ್ನು ಶುಚಿಗೊಳಿಸದೆ ಪಾಲಿಕೆಯ ಅಧಿಕಾರಿಗಳು ಜನರ ಆರೋಗ್ಯದ ಜೊತೆಗೆ ಚೆಲ್ಲಾಟವಾಡುತ್ತಿದ್ದಾರೆ ಎಂದು ಸದಸ್ಯರು ದೂರಿದರು.

ಮಹಾನಗರ ಪಾಲಿಕೆಯಲ್ಲಿ ಬೆಳಗಾವಿ ದಕ್ಷಿಣ ಮತಕ್ಷೇತ್ರದಲ್ಲಿ ಲೋಕೋಪ ಯೋಗಿ ಇಲಾಖೆಯಿಂದ ಸಾಕಷ್ಟು ಅಭಿವೃದ್ಧಿ ಕೆಲಸವಾಗಿದೆ. ಅದಕ್ಕೆ ನಮ್ಮ ವಿರೋಧ ಇಲ್ಲ. ಸ್ವಾಗತಾರ್ಹ. ಆದರೆ ಬೆಳಗಾವಿ ಉತ್ತರ ಮತಕ್ಷೇತ್ರದಲ್ಲಿ ಅಭಿವೃದ್ಧಿಯಾಗದೆ ಒಂಬತ್ತುವರೆ ಕೋಟಿ ರೂ. ಬಾಕಿ ಉಳಿದಿದೆ. ಕೆಲಸ ಮಾಡದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು ಸೇವೆಯಿಂದ ಬೇರೆ ಕಡೆ ವರ್ಗಾವಣೆ ಮಾಡಿ ಎಂದು ಪಾಲಿಕೆ ಬಿಜೆಪಿ ಸದಸ್ಯ ಹನುಮಂತ ಕೊಂಗಾಲಿ ಒತ್ತಾಯಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ, ಸಂಬಂಧಿಸಿದ ಆಧಿಕಾರಿಗಳು ಉತ್ತರ ಮತಕ್ಷೇತ್ರದಲ್ಲಿ ಯಾವ ಆಧಾರದ ಮೇಲೆ ಕೆಲಸ ಮಾಡಿದ್ದಾರೆ. ಒಂಬತ್ತುವರೆ ಕೋಟಿ ಹಣ ಬಾಕಿ ಉಳಿದಿರುವ ಬಗ್ಗೆ ಮಾಹಿತಿ ಪಡೆಯಲಾಗುವುದು ಎಂದರು.

ಬಿಜೆಪಿ ಸದಸ್ಯ ರವಿ ಧೋತ್ರೆ ಮಾತನಾಡಿ, ಪಾಲಿಕೆಯ ಸದಸ್ಯರು ವೈಯಕ್ತಿಕ ಕೆಲಸ ತೆಗೆದುಕೊಂಡು ಬರುತ್ತಾರೆ ಎನ್ನುವ ಮಾತನ್ನು ಹಿಂಪಡೆದುಕೊಳ್ಳಿ. ಜನರ ಸಮಸ್ಯೆಯನ್ನು ಸಭೆಯಲ್ಲಿ ಗಮನ ಸೆಳೆದರೆ ಅದು ಹೇಗೆ ವೈಯಕ್ತಿಕವಾಗುತ್ತದೆ ಎಂದರು. ಕೊನೆಗೆ ಆಡಳಿತ ಪಕ್ಷದ ನಾಯಕ ರಾಜಶೇಖರ ಡೋಣಿ ಸಭೆಯ ವಿಷಯಾಂತರವಾಗುವುದು ಬೇಡ ಜನರ ಸಮಸ್ಯೆಯ ಬಗ್ಗೆ ಸಭೆ ಕರೆಯಲಾಗಿದೆ ಎಂದು ತಿಳಿಗೊಳಿಸಿದರು.

ಕಾಂಗ್ರೆಸ್ ಸದಸ್ಯ ಅಜೀಂ ಪಟವೇಗರ ಮಾತನಾಡಿ, ಯು-ಜಿಡಿ ಕೆಲಸದಿಂದ ನಗರದ ಜನ-ರಿಗೆ ಸಾಕಷ್ಟು ಸಮಸ್ಯೆಯಾಗಿದೆ. ಈ ಸಮಸ್ಯೆಯನ್ನು ಅಧಿಕಾರಿಗಳಿಗೆ ಬಗೆಹರಿಸಲು ಸಾಧ್ಯವಾಗುತ್ತಿಲ್ಲ ಏಕೆ ಎಂದು ಪ್ರಶ್ನಿಸಿದರು.

ಬೆಳಗಾವಿ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಿಲೇವಾರಿ ಮಾಡಲು ಸುಮಾರು 160 ಕಸದ ಗಾಡಿಯನ್ನು ಖರೀದಿಸಲಾಗಿದೆ. ಇದರಲ್ಲಿ ಸುಮಾರು 80 ಕಸದ ಗಾಡಿಗಳು ನಿಂತಲ್ಲಿಯೇ ನಿಂತಿವೆ ಎಂದು ಪಾಲಿಕೆ ಸದಸ್ಯ ರವಿ ದೋತ್ರೆ ದೂರಿದರು.

ಇದಕ್ಕೆ ಪ್ರತಿಕ್ರಿಯಿಸಿದ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ, ಪಾಲಿಕೆಗೆ ಹಂಚಿಕೆಯಾಗಿದ್ದ ಕಸದ ಗಾಡಿಗಳಿಗೆ ವಾಹನದ ಚಾಲಕರ ಸಮಸ್ಯೆ ಇದೆ. ಹಲವಾರು ಬಾರಿ ಟೆಂಡರ್ ಕರೆದರೂ ಯಾರು ಬರಲಿಲ್ಲ. ಆದಷ್ಟು ಬೇಗ ಸೇವೆಗೆ ಕಸದ ಗಾಡಿಯನ್ನು ಅಣಿಗೊಳಿಸಲಾಗುವುದು ಎಂದರು.

ಶಾಸಕ ನಿಖಿಲ್ ಕತ್ತಿ ವಿವಿಧ ಕಾರ್ಯಕ್ರಮಗಳಿಗೆ ಚಾಲನೆ

ಬೀಜ, ಪಠ್ಯಪುಸ್ತಕ ವಿತರಣೆ, ವಿಶ್ವ ಪರಿಸರ ದಿನಾಚರಣೆ

ಹುಕ್ಕೇರಿ : ಪಟ್ಟಣದ ವಿವಿಧ ಕಡೆಗಳಲ್ಲಿ ಸೋಮವಾರ ಮಿಂಚಿನ ಸಂಚಾರ ನಡೆಸಿದ ನೂತನ ಶಾಸಕ ನಿಖಿಲ್ ಕತ್ತಿ ಅವರು ವಿವಿಧ ಕಾರ್ಯಕ್ರಮಗಳಿಗೆ ಚಾಲನೆ ನೀಡಿದರು.

ಕೃಷಿ ಇಲಾಖೆ ಕಚೇರಿ ಬಳಿ ರೈತರಿಗೆ ಬಿತ್ತನೆ ಬೀಜ ವಿತರಣೆ, ಸರ್ಕಾರಿ ಉರ್ದು ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆ ನಿಮಿತ್ತ ಸಸಿ ನೆಡುವ ಕಾರ್ಯಕ್ರಮಕ್ಕೆ ಶಾಸಕ ನಿಖಿಲ್ ಕತ್ತಿ ಚಾಲನೆ ನೀಡಿದರು. ಇದೇ ವೇಳೆ ಅಲ್ಲಿನ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಹಾಗೂ ಸಮವಸ್ತ್ರಗಳನ್ನು ವಿತರಿಸಿದರು.

ಬಳಿಕ ಪಿಎಲ್‌ಡಿ ಬ್ಯಾಂಕ್‌ನಲ್ಲಿ ಜನತಾದರ್ಶನ ನಡೆಸಿದ ಶಾಸಕರು, ಕ್ಷೇತ್ರದ ವಿವಿಧ ಹಳ್ಳಿಗಳಿಂದ ಆಗಮಿಸಿದ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ ಸಂಬಂಧಿಸಿದ ಅಧಿಕಾರಿಗಳು ಮತ್ತು ಇಲಾಖೆಗೆ ಪರಿಹರಿಸಲು ಸೂಚಿಸಿದರು.

ಈ ವೇಳೆ ಶಾಸಕ ನಿಖಿಲ್ ಕತ್ತಿ ಮಾತನಾಡಿ, ಪ್ರಸಕ್ತ ಮುಂಗಾರು ಹಂಗಾಮಿಗೆ ಬೇಕಾಗುಷ್ಟು ಬೀಜ ಮತ್ತು ಗೊಬ್ಬರ ದಾಸ್ತಾನು ಮಾಡಿಕೊಳ್ಳಲಾಗಿದ್ದು ವಿತರಣೆಗೆ ಅಗತ್ಯ ಕೇಂದ್ರಗಳನ್ನು ತೆರೆಯಲಾಗಿದೆ. ರೈತರು ಚಿಂತೆ ಮಾಡುವ ಅಗತ್ಯವಿಲ್ಲ. ಅರಣ್ಯ ಇಲಾಖೆಯಿಂದ ಕ್ಷೇತ್ರವನ್ನು ಹಸಿರೀಕರಣಗೊಳಿಸಲು ವಿವಿಧ ಜಾತಿಯ ಸಸಿಗಳನ್ನು ನೆಟ್ಟು ಪೋಷಿಸಲು ಹೆಚ್ಚಿನ ಒತ್ತು ನೀಡಲಾಗಿದೆ. ಶಾಲಾ ಆರಂಭದಲ್ಲಿಯೇ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಮತ್ತು ಸಮವಸ್ತ್ರ ವಿತ-ರಿಸಲಾಗುತ್ತಿದೆ ಎಂದರು.

ತಾಪಂ ಇಒ ಉಮೇಶ ಸಿದ್ನಾಳ, ಬಿಇಒ ಮೋಹನ ದಂಡಿನ್, ಸಹಾಯಕ ಕೃಷಿ ನಿರ್ದೇಶಕ ಎಂ. ಎಸ್.ಪಟಗುಂದಿ, ವಲಯ ಅರಣ್ಯ ಅಧಿಕಾರಿಗಳಾದ ಪ್ರಸನ್ ಬೆಲ್ಲದ, ಮಹಾಂತೇಶ ಸಜ್ಜನ, ಪುರಸಭೆ ಮಾಜಿ ಉಪಾಧ್ಯಕ್ಷ ಆನಂದ ಗಂಧ, ಮುಖಂಡರಾದ ಸತ್ಯೆಪ್ಪಾ ನಾಯಿಕ, ಪರಗೌಡ ಪಾಟೀಲ, ಸಿದ್ಧಪ್ಪಾ ಹಳಿಜೋಳ, ರಾಜು ಮೋಮಿನದಾದಾ, ಚನ್ನಪ್ಪ ಗಜಬರ, ರಾಜು ಕುರಂದವಾಡೆ, ರಿಯಾಜ್ ಮುಲ್ಲಾ, ಮುನ್ನಾ ಕಳಾವಂತ ಮತ್ತಿತರರು ಉಪಸ್ಥಿತರಿದ್ದರು.

ನೇಣು ಬಿಗಿದುಕೊಂಡು ಸಾವಿಗೆ ಶರಣಾದ ಸಹೋದರಿಯರು



ಧಾರವಾಡ : ಧಾರವಾಡ ಜಿಲ್ಲೆಯ ಕಲಘಟಗಿ ಪಟ್ಟಣದಲ್ಲಿ ಅಕ್ಕ-ತಂಗಿ ನೇಣು ಬಿಗಿದುಕೊಂಡು ಆತ್ಮ ಹತ್ಯೆ ಮಾಡಿಕೊಂಡ ಘಟನೆ ನಡೆದಿದೆ.

ಪಟ್ಟಣದ ಬೆಂಡಿಗೇರಿ ಓಣಿಯಲ್ಲಿನ ಬಾಡಿಗೆ ಮನೆಯೊಂದರಲ್ಲಿ ವಾಸವಾಗಿದ್ದ ಕಾವೇರಿ ಹಡಪದ (19), ಭೂಮಿಕಾ ಹಡಪದ(17) ಆತ್ಮಹತ್ಯೆಗೆ ಶರಣಾದ ಸಹೋದರಿಯರು ಎಂದು ತಿಳಿದು ಬಂದಿದೆ.

ಇಬ್ಬರು ಮನೆಯಲ್ಲಿ ತಾಯಿ ಇಲ್ಲದ ವೇಳೆಯಲ್ಲಿ ಒಂದೇ ಸೀರೆಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಈ ಕುರಿತು ಕಲಘಟಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ಸಿಪಿಐ ಶ್ರೀಶೈಲ ಕೌಜಲಗಿ ತನಿಖೆ ಕೈಗೊಂಡಿದ್ದಾರೆ.

ಕೃಷಿ ವಿಜ್ಞಾನ ಕೇಂದ್ರದಲ್ಲಿ ವಿಶ್ವ ಪರಿಸರ ದಿನಾಚರಣೆ

ಬೆಳಗಾವಿ: ಮತ್ತಿಕೊಪ್ಪದ ಐಸಿಎಆರ್-ಕೆಎಲ್ಇ ಕೃಷಿ ವಿಜ್ಞಾನ ಕೇಂದ್ರದ ಆವರಣದಲ್ಲಿ "ವಿಶ್ವ ಪರಿಸರ ದಿನ" ವನ್ನು ಆಚರಿಸಲಾಯಿತು.

ಪರಿಸರ ದಿನಾಚರಣೆಯನ್ನು ಕೇಂದ್ರದ ವಿಜ್ಞಾನಿ ಎಸ್. ಎಮ್. ವಾರದ ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ವಿಶ್ವ ಪರಿಸರ ದಿನಾಚರಣೆಯನ್ನು 1973 ರಿಂದ ಪ್ರತಿ ವರ್ಷ ಜೂನ್ 5 ರಂದು ವಿಶ್ವದೆಲ್ಲೆಡೆ ಪರಿಸರದ ಕುರಿತು ಜನಜಾಗೃತಿ ಮೂಡಿಸಲು ಆಚ-ರಿಸಲಾಗುತ್ತಿದೆ. 2023 ಕ್ಕೆ ವಿಶ್ವ ಪರಿಸರ ದಿನಾಚರಣೆಗೆ 50 ವರ್ಷಗಳು ಸಂದಿವೆ, ಈ ವರ್ಷದ ವಿಶ್ವ ಪರಿಸರ ದಿನವನ್ನು "ಪರಿಸರವ್ಯವಸ್ಥೆಯ ಪುನಃಸ್ಥಾಪನೆ" ಎಂಬ ಘೋಷವಾಕ್ಯದೊಂದಿಗೆ ಆಚರಿಸಲಾಗುತ್ತಿದೆ ಎಂದರು. ಜಾಗತಿಕವಾಗಿ ಪ್ರತಿವರ್ಷ 400 ಮಿಲಿಯನ್ ಟನ್ ಪ್ಲಾಸ್ಟಿಕ್ ತ್ಯಾಜ್ಯ ಉತ್ಪಾದನೆಯಾಗುತ್ತಿದ್ದು ಭಾರತ ದೇಶದಲ್ಲಿ 3.4 ಮಿಲಿಯನ್ ಟನ್ ಉತ್ಪಾದನೆಗೊಂಡು ದೇಶವು ವಿಶ್ವದಲ್ಲಿ ಐದನೇ ಸ್ಥಾನದಲ್ಲಿದೆ.

ಇದರಲ್ಲಿ ಶೇಕಡ 30 ರಷ್ಟು ಮಾತ್ರ ಪ್ಲಾಸ್ಟಿಕ್ ತ್ಯಾಜ್ಯವನ್ನು ಪುನರ್ ಬಳಕೆ ಮಾಡಲಾಗುತ್ತಿದೆ. ಈ ತ್ಯಾಜ್ಯವನ್ನು ಹೇರಳವಾಗಿ ನದಿ, ಸಾಗರ ಹಾಗೂ ಸರೋವರಗಳಲ್ಲಿ ವಿಲೇವಾರಿಯಾಗುತ್ತಿದ್ದು, ಜಲಚರ ಜೀವಿಗಳಿಗೆ ಹಾನಿಯಾಗುತ್ತಿದೆ. ಅಲ್ಲದೆ ಪ್ಲಾಸ್ಟಿಕ್‌ನ ಸೂಕ್ಷ್ಮಕಣಗಳು ಗಾಳಿ, ನೀರು ಮತ್ತು ಆಹಾರದಲ್ಲಿ ಸೇರ್ಪಡೆಗೊಂಡು ಮಾನವ ಸೇರಿದಂತೆ ಜೀವ ಸಂಕುಲಕ್ಕೆ ಮಾರಕವಾಗಿ ಜೀವ ವೈವಿಧ್ಯತೆ ಹಾಗೂ ಪರಿಸರ ವ್ಯವಸ್ಥೆ ಮೇಲೆ ದುಷ್ಪ-ರಿಣಾಮ ಬೀರುತ್ತಿದೆ ಎಂದರು. ಕಾರಣ, ಒಂದೆ ಸಲ ಬಳಸಬಹುದಾದ ಪ್ಲಾಸ್ಟಿಕ್ ಚೀಲಗಳನ್ನು ಉಪಯೋಗಿಸದೆ ಪುನರ್ ಬಳಕೆ ಮಾಡಬಹುದಾದ ಗುಣಮಟ್ಟದ ಪ್ಲಾಸ್ಟಿಕ್‌ನ್ನು ಬಳಸಿ ಪರಿಸರ ವ್ಯವಸ್ಥೆಯ ಸಮತೋಲನವನ್ನು ಕಾಪಾಡುವಂತೆ ಸಲಹೆ ನೀಡಿದರು.

ಕಾರ್ಯಕ್ರಮದ ಭಾಗವಾಗಿ ತೋಟಗಾರಿಕೆ ಸಸಿ ನೆಡುವ ಕಾರ್ಯಕ್ರಮ ಜರುಗಿಸಲಾಯಿತು ಹಾಗೂ ಸಸಿಗಳನ್ನು ವಿತರಿಸಲಾಯಿತು. ಕೇಂದ್ರದ ಸಿಬ್ಬಂದಿಗಳಾದ ಪ್ರವೀಣ ಯಡಹಳ್ಳಿ, ಶಂಕರಗೌಡ ಪಾಟೀಲ, ವಿನೋದ ಕೋಚಿ ಹಾಗೂ ಮಂಜುನಾಥ ಪಿ. ಐ. ಭಾಗವಹಿಸಿದ್ದರು.

ಪರಿಸರ ರಕ್ಷಿಸುವ ಕಾರ್ಯಕ್ಕೆ ಮುಂದಾಗಿ: ಸಚಿವ ಸತೀಶ್ ಜಾರಕಿಹೊಳಿ

ಗೋಕಾಕ: ಗಿಡ-ಮರಗಳ ಸಂರಕ್ಷಣೆಗೆ ಎಲ್ಲರೂ ಮುಂದಾಗಬೇಕು. ಆ ಮೂಲಕ ಜೀವಸಂಕುಲ ಉಳಿವಿಗೆ ಶ್ರಮಿಸಬೇಕು ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ, ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಘಟಪ್ರಭ ಅರಣ್ಯ ವಿಭಾಗದಿಂದ ನಗರದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆಯನ್ನು ಗಿಡ ನೆಡುವ ಮೂಲಕ ಆಚರಿಸಿ ನಂತರ ಮಾತನಾಡಿದ ಅವರು, ಉತ್ತಮ ಪರಿಸರದಿಂದ ಮಾನವನು ಅತ್ಯುತ್ತಮ ಜೀವನ ನಡೆಸಲು ಸಾಧ್ಯವಾಗುತ್ತದೆ. ಮಾನವನ ದುರಾಸೆಯಿಂದಾಗಿ ಇಂದು ಪರಿಸರ ನಾಶವಾಗುತ್ತಿದ್ದು, ಜಾಗತಿಕ ತಾಪಮಾನ ಹೆಚ್ಚಳವಾಗಿ ಇಡೀ ಜೀವ ಸಂಕುಲ ಸಂಕಷ್ಟ ಎದುರಿಸುವಂತಾಗಿದೆ.

ಇದೇ ರೀತಿ ಪರಿಸರ ನಾಶ ಮುಂದುವರಿದರೆ ಭವಿಷ್ಯದಲ್ಲಿ ಉತ್ತಮ ಗಾಳಿಯನ್ನು ಹಣ ಕೊಟ್ಟು ಖರೀದಿಸಬೇಕಾದ ಪರಿಸ್ಥಿತಿ ಎದುರಾಗಬಹುದು. ಹೀಗಾಗಿ, ಮಾನವನು ಜಾಗೃತನಾಗಿ ಪರಿಸರ ರಕ್ಷಿಸುವ ಕಾರ್ಯಕ್ಕೆ ಮುಂದಾಗಬೇಕು. ಖಾಲಿ ಪ್ರದೇಶಗಳಲ್ಲಿ ಗಿಡನೆಟ್ಟು ಆರೈಕೆ ಮಾಡುವ ಮೂಲಕ ಅರಣ್ಯ ಸಂಪತ್ತನ್ನು ಹೆಚ್ಚಿಸಬೇಕು ಎಂದರು.

ಮನುಷ್ಯ ಯಾವುದೇ ಲಾಭವಿಲ್ಲದೆ ಕೆಲಸ ಮಾಡುವುದಿಲ್ಲ. ಗಿಡಗಳನ್ನು ನೆಡುವುದರಿಂದ ನಮಗೇನು ಲಾಭವಿಲ್ಲವೆಂದು ಗಿಡ ನೆಡಲು ಯಾರೂ ಮುಂದಾಗುತ್ತಿಲ್ಲ. ಆದರೆ, ಗಿಡನೆಡದಿದ್ದರೆ ಮಾನವ ಸಂತತಿಯೇ ನಶಿಸಿ ಹೋಗುತ್ತದೆ ಎಂಬ ಅರಿವಿಲ್ಲದಂತಾಗಿದೆ. ಮನೆಗಳಲ್ಲಿ ನಡೆಯುವ ಕಾರ್ಯಕ್ರಮಗಳಿಗೆ ದುಬಾರಿ ಉಡುಗೊರೆ ನೀಡುವ ಬದಲು, ಕಾರ್ಯಕ್ರಮದ ಹೆಸರಿನಲ್ಲಿ ಗಿಡಗಳನ್ನು ನೆಡುವ ಸಂಪ್ರದಾಯ ಬೆಳೆಯಬೇಕು.ಅರಣ್ಯ ಸಂಪತ್ತನ್ನು ಹೆಚ್ಚಿಸಲು ಗಿಡಗಳನ್ನು ನೆಡುವುದು ಎಷ್ಟು ಮುಖ್ಯವೋ, ನೆಟ್ಟ ಗಿಡಗಳು ಮರವಾಗುವಂತೆ ಆರೈಕೆ ಮಾಡುವುದು ಅಷ್ಟೆ? ಮುಖ್ಯವಾಗಿದೆ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಡಿ.ಎಫ್.ಓ ಅಂಥೋನಿ ಮರಿಯಪ್ಪ, ಆರ್. ಎಫ್.ಓ ಸಂಜೀವ್ ಸಂಸುದ್ದಿ ಸೇರಿದಂತೆ ಅರಣ್ಯ ಇಲಾಖೆ ಸಿಬ್ಬಂದಿ ಇದ್ದರು.

ವಿಶ್ವ ತಂಬಾಕು ರಹಿತದಿನ ಆಚರಣೆ

ಬೆಳಗಾವಿ: ವಿಶ್ವ ಆರೋಗ್ಯ ಸಂಸ್ಥೆಯ ಕರೆಯಂತೆ ಪ್ರತಿವರ್ಷ ಮೇ 31ರಂದು ವಿಶ್ವ ತಂಬಾಕು ರಹಿತ ದಿನವನ್ನ ಆಚರಿಸಲಾಗುತ್ತದೆ ಇದರ ನಿಮಿತ್ತ ಬೆಳಗಾವಿಯ ಕೆ.ಎಲ್.ಇ ವಿಶ್ವನಾಥಕತ್ತಿ ದಂತ ಮಹಾವಿದ್ಯಾಲಯದಲ್ಲಿ ಇತ್ತೀಚೆಗೆ ವಿಶ್ವ ತಂಬಾಕುರಹಿತ ದಿನವನ್ನ ಆಚರಿಸಲಾಯಿತು. ವಿದ್ಯಾಲಯದ ಓರಲ್ ಮೆಡಿಸನ್ ಮತ್ತು ರೇಡಿಯಾಲಜಿ ವಿಭಾಗವು ವಿದ್ಯಾಲಯದ ರಾಷ್ಟ್ರೀಯ ಸೇವಾ ಘಟಕದ ಸಹಯೋಗದೊಂದಿಗೆ ಸಾರ್ವಜನಿಕರು ತಂಬಾಕು ಸೇವನೆಯನ್ನ ತೊರೆಯುವ ಕುರಿತು ಜಾಗ್ರತೆ ಮೋಡಿಸುವ ಅನೇಕ ಕಾರ್ಯಕ್ರಮಗಳನ್ನ ನಡೆಸಿತು. ಡಾ. ದಾನೇಶ್ವರಿ ಕೊಷ್ಠಿ ಮತ್ತು ಡಾ.ವೈಶಾಲಿ ಕೆಲೊಸ್ಕರ್ ಇವರುಗಳು ನಗರದ ಅನೇಕ ಪ್ರದೇಶಗಳಲ್ಲಿ ಜನರು ತಂಬಾಕು ತ್ಯಜಿಸುವಂತೆ ಪ್ರೇರೇಪಿಸುವ ಹಲವು ಉಪನ್ಯಾಸಗಳನ್ನ ನೀಡಿದರು.

ಹಾಲಬಾವಿ ಗ್ರಾಮದಲ್ಲಿ ಐಟಿಬಿಪಿ ಪ್ರಶಿಕ್ಷಣಾರ್ಥಿಗಳು, ಅಧಿಕಾರಿಗಳಿಗೆ ಮತ್ತು ಅಲ್ಲಿನ ಕುಟುಂಬ ಸದಸ್ಯರಿಗೆ ಅತಿಥಿ ಉಪನ್ಯಾಸ ಮತ್ತು ಉಚಿತ ದಂತ ಶಿಬಿರವನ್ನ ಆಯೋಜಿಸಲಾಗಿತ್ತು. 3ನೇ ವರ್ಷದ ದಂತ ವಿದ್ಯಾರ್ಥಿಗಳು ದಂತ ಆರೋಗ್ಯ ಕುರಿತು ಮತ್ತು ತಂಬಾಕು ಸೇವನೆಯ ದುಷ್ಪರಿಣಾಮ ಕುರಿತ ಕಿರು ನಾಟಕವನ್ನ ಪರಿಣಾಮಕಾ-ರಿಯಾಗಿ ಅಭಿನಯಿಸಿ ಎಲ್ಲರ ಮೆಚುಗೆ ಪಡೆದರು. ಈ ಸಂದರ್ಭದಲ್ಲಿ ಡಿಐಜಿ ಮುಖೇಶ್ ಸರಾಫ್, ಕಮೆಂಡೆಂಟ್ ಜೈದೀಪ್, ಸಿಎಂಓ ಡಾ.ಅಜಿತ್ ಕುಮಾರ್, ಡಾ.ವೈಶಾಲಿ ಕೆಲೊಸ್ಕರ್, ಡಾ.ಅರವಿಂದ್ ಶೆಟ್ಟಿ, ಡಾ.ದಾನೇಶ್ವರಿ ಕೊಷ್ಠಿ ಮತ್ತು ಇಂಟರ್ನಿ ವೈದ್ಯರು ಉಪಸ್ಥಿತ-ರಿದ್ದರು. ಶೈಕ್ಷಣಿಕ ಕರಪತ್ರಗಳ ವಿತರಣೆಯೊಂದಿಗೆ ಬಾಯಿಯ ಕ್ಯಾನ್ಸರ್ ರೋಗಿಗಳ ಪಟಗಳನ್ನ ತೋರಿಸಲಾಯಿತು. ಎಲ್ಲರಿಗೊ ಉಚಿತ ದಂತ ತಪಾಸಣೆ ನಡೆಸಿ ತಂಬಾಕು ತ್ಯಜಿಸುವಂತೆ ಸಲಹೆ ನೀಡಲಾಯಿತು.

ಇದಕ್ಕೊ ಮೊದಲು ಕೆ.ಎಲ್.ಇ ದಂತಮಹಾವಿದ್ಯಾಲಯದಲ್ಲಿ ಇಂದು ಚಿಕೀತ್ಸೆಗಾಗಿ ಆಗಮಿಸಿದ್ದ ಜನರಿಗೆ ಕರಪತ್ರ